ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 08 | Issue : 46 | Saturday 25-10-2025 | E-mail : maruti.b.hosamani76@gmail.com | Page: 4 | Price : Rs. 1/-

ರೈತರ ನಷ್ಟಕ್ಕೆ ಕಾರಣರಾದ ಕಂಪನಿಗಳ ವಿರುದ್ಧ – ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹ

ಸಿಹಿ ಕಹಿ ಸುದ್ದಿ,

ರಾಯಚೂರು: ಮಾನ್ವಿ ತಾಲೂಕಿನ ವಿವಿಧ ಹಳ್ಳಿಗಳ ರೈತರಿಗೆ ನಕಲಿ ಮತ್ತು ಕಳಪೆ ಗುಣಮಟ್ಟದ ಬತ್ತದ ಬೀಜ ಮಾರಾಟವಾದ ಪರಿಣಾಮ ಸಾವಿರಾರು ರೈತರು ಬೆಳೆ ನಷ್ಟದ ಭೀತಿಯಲ್ಲಿ ಬದುಕುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ದಲಿತ ಸೇನೆ ಮತ್ತು ಜನಸೇವಾ ಫೌಂಡೇಶನ್ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಸೇನೆ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಜನಸೇವಾ ಫೌಂಡೇಶನ್ ರಾಜ್ಯಾಧ್ಯಕ್ಷ ಡಾ. ಜಾವೀದ್ ಖಾನ್ ಅವರು ಹೇಳಿದರು.

"ನೀಲಕಂಠೇಶ್ವರ ಸೀಡ್ಸ್ ಕಾರ್ಪೊರೇಷನ್ನ ಕಳಪೆ ಬತ್ತದ ಬೀಜಗಳಿಂದ ರೈತರಿಗೆ ನಷ್ಟ ಉಂಟಾಗಿದೆ. ಇಂತಹ ನಕಲಿ ಬೀಜ ಮಾರಾಟಕ್ಕೆ ಕಾರಣರಾದ ಕಂಪನಿಗಳ ಪರವಾನಗಿ ರದ್ದು ಪಡಿಸಿ, ಅಧಿಕಾರಿಗಳ ನಿರ್ಲಕ್ಷ್ಯತನದ ಬಗ್ಗೆ ತನಿಖೆ ಮಾಡಬೇಕು. ರೈತರ ನಷ್ಟಕ್ಕೆ ಸರ್ಕಾರದಿಂದ ತಕ್ಷಣ ಪರಿಹಾರ ನೀಡಬೇಕು," ಎಂದು ಆಗ್ರಹಿಸಿದರು.

ಜನಸೇವಾ ಫೌಂಡೇಶನ್ ಮಾನ್ವಿ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಮಾತನಾಡಿ, "ಮಾನ್ವಿ ತಾಲೂಕಿನ 2000 ಎಕರೆ ನೀರಾವರಿ ಭತ್ತದ ಹೊಲಗಳಿಗೆ ಕಳಪೆ ಬೀಜ ವಿತರಣೆ ಆಗಿದ್ದು, ರೈತರು ನಷ್ಟಕ್ಕೆ ಒಳಗಾಗಿದ್ದಾರೆ. ಅಧಿಕಾರಿಗಳು ಮೌನ ವಹಿಸಿರುವುದು ಖಂಡನೀಯ. ರೈತರ ಹಿತಕ್ಕಾಗಿ ನ್ಯಾಯ ದೊರಕುವವರೆಗೆ ಹೋರಾಟ ಮುಂದುವರಿಯಲಿದೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ದಲಿತ ಸೇನೆ ಜಿಲ್ಲಾಧ್ಯಕ್ಷ ಮಾರುತಿ ಚಿಕ್ಕಸೂಗೂರು, ಬಾಬು ರಾವ್, ರಾಜಾಸಾಬ್ ನೀರಮಾನ್ವಿ, ಸಿದ್ದರೆಡ್ಡಿ, ಪ್ರೊ. ಚಂದ್ರಶೇಖರ, ಕೃಷ್ಣ ಮಾರ್ಷಲ್, ಸುರೇಶ ಚಿಕ್ಕಸುಗೂರು, ಮೌಲ, ಆಜೀತ್, ಗೊಕುಲ್ ಸೇರಿದಂತೆ ದಲಿತ ಸೇನೆ ಹಾಗೂ ಜನಸೇವಾ ಫೌಂಡೇಶನ್ ಕಾರ್ಯಕರ್ತರು, ರೈತರು ಹಾಗೂ ಸಂಘಟನೆಯ ನಾಯಕರು ಉಪಸ್ಥಿತರಿದ್ದರು.

ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ

ಕಲ್ಕತ್ತಾ ಯಾತ್ರೆಯ ಅನುಭವಗಳು ವರ್ಣನಾತೀತ – ಶ್ರೀಮತಿ ಜಿ.ಯಶೋಧಾ ಪ್ರಕಾಶ್

ಸಿಹಿ ಕಹಿ ಸುದ್ದಿ,

ಚಳ್ಳಕೆರೆ : ತಾವು ಕೈಗೊಂಡ ಕಲ್ಕತ್ತಾ–ಬೇಲೂರು ಮಠದ ಯಾತ್ರೆಯ ಅನುಭವಗಳು ವರ್ಣನಾತೀತವಾದವು ಎಂದು ಚಳ್ಳಕೆರೆಯ ಶ್ರೀಶಾರದಾಶ್ರಮದ ಸದ್ಭಕ್ತರಾದ ಶ್ರೀಮತಿ ಜಿ ಯಶೋಧಾ ಪ್ರಕಾಶ್ ತಿಳಿಸಿದರು. ನಗರದ ವಾಸವಿ ಕಾಲೋನಿಯ ಶ್ರೀಶಾರದಾಶ್ರಮದ ದೇವಸ್ಥಾನದಲ್ಲಿ ಆಯೋಜಿಸಿದ್ದ ವಾರದ ವಿಶೇಷ ಸತ್ಸಂಗ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಅವರು ತಮ್ಮ ಕಲ್ಕತ್ತಾ ಯಾತ್ರೆಯ ಪ್ರವಾಸಾನುಭವಗಳನ್ನು ಭಕ್ತರೊಂದಿಗೆ ಹಂಚಿ ಕೊಂಡರು.

ಈ ಸತ್ಸಂಗದ ಪ್ರಯುಕ್ತ ಶ್ರೀಶಾರದಾಶ್ರಮದ ಸದ್ಭಕ್ತರಿಂದ ಸಾಮೂಹಿಕ ಭಜನೆ, ದಿವ್ಯತ್ರಯರಿಗೆ ಮಂಗಳಾರತಿ ನಡೆಯಿತು.

ಸತ್ಸಂಗ ಕಾರ್ಯಕ್ರಮದಲ್ಲಿ ಶ್ರೀಶಾರದಾಶ್ರಮದ ಸದ್ಭಕ್ತರಾದ ಶ್ರೀಮತಿಮಂಜುಳಾಉಮೇಶ್,ಸಿ. ಎಸ್.ಭಾರತಿ ಚಂದ್ರಶೇಖರ್, ನಾಗರಾಜ್, ಕಾವೇರಿ ಸುರೇಶ್ ಅನಿತಾ ದಿವ್ಯ, ಸುಮನಾ ಕೋಟೇಶ್ವರ ಸೇರಿದಂತೆ ಸದ್ಭಕ್ತರು ಭಾಗವಹಿಸಿದ್ದರು.

ವರದಿ–ಯತೀಶ್ ಎಂ ಸಿದ್ದಾಪುರ, ಚಳ್ಳಕೆರೆ.

ಸಂಡೂರಿನಲ್ಲಿ ಎದ್ದೇಳು ಕನ್ನಡಿಗ ಕೆ.ಆರ್. ಎಸ್ ಪಕ್ಷ – ಸೇರು ಬಾ ಅಭಿಯಾನ ಯಶಸ್ವಿ

ಸಿಹಿ ಕಹಿ ಸುದ್ದಿ,

ಸಂಡೂರು : ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ವತಿಯಿಂದ ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಹಮ್ಮಿಕೊಂಡಿದ್ದ ಎದ್ದೇಳು ಕನ್ನಡಿಗ ಕೆ.ಆರ್. ಎಸ್ ಪಕ್ಷ ಸೇರು ಬಾ ಅಭಿಯಾನ ಯಶಸ್ವಿಯಾಗಿ ನಡೆಯಿತು. ನಗರದ ವಿಜಯ ವೃತ್ತದಿಂದ ಅಭಿಯಾನಕ್ಕೆ ಚಾಲನೆ ನೀಡಿ ತಾಲೂಕಾದ್ಯಂತ ಅಭಿಯಾನ ಮಾಡಿ ಜನ ಜಾಗೃತಿ ಹಾಗೂ ಪಕ್ಷದ ಸದಸ್ಯತ್ವ ಮಾಡುವ ಮೂಲಕ ದೇಣಿಗೆ ಸಂಗ್ರಹಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೆ.ಆರ್.ಎಸ್ ಪಕ್ಷದ ರಾಜ್ಯ ರೈತ ಘಟಕದ ಕಾರ್ಯದರ್ಶಿ ನಿರುಪಾದಿ.ಕೆ ಗೋಮರ್ಸಿ ಅವರು ಇತ್ತೀಚಿನ ದಿನಗಳಲ್ಲಿ ಕನ್ನಡಿಗರು ಅನುಭವಿಸುತ್ತಿರುವ ನೋವುಗಳಿಗೆ, ಕಷ್ಟ ಕಾರ್ಪಣ್ಯಗಳಿಗೆ ನಮ್ಮನ್ನು ಆಳುತ್ತಿರುವ ಎಲ್ಲಾ ರಾಜಕೀಯ ಪಕ್ಷಗಳು ನೇರವಾಗಿ ಕಾರಣ.

ಅವರವರ ಸ್ವಾರ್ಥದ ಮತ್ತು ಕುಟುಂಬದ ರಾಜಕಾರಣದಲ್ಲಿ ತಾಲೂಕಿನ ಜನರನ್ನು ಮೂರ್ಖರನ್ನಾಗಿ ಮಾಡಿ ಜನರನ್ನು ವಂಚಿಸುತ್ತಿದ್ದಾರೆ ಜನಪರವಾದ ಆಡಳಿತ ನಡೆಸಬೇಕಾದ ಪಕ್ಷಗಳು ಜಾತಿ ರಾಜಕಾರಣ,ಹಣಬಲದ ರಾಜಕಾರಣದಲ್ಲಿ ತೊಡಗಿಸಿಕೊಂಡಿವೆ ಹಾಗಾಗಿ ನಮ್ಮ ಪಕ್ಷವು ಕನ್ನಡ ನಾಡಿನ ನೆಲ,ಜಲ,ಗಡಿ ಭಾಷೆಯ ಉಳಿವಿಗಾಗಿಮತ್ತುಕನ್ನಡಿಗರಿಗೆಉದ್ಯೋಗದಲ್ಲಿ ಹೆಚ್ಚಿನ ಆದ್ಯತೆ ನೀಡುವಿಕೆಗಾಗಿ ಒತ್ತಾಯಿಸಿ ಮುಂದಿನ ನವಂಬರ್ ತಿಂಗಳಲ್ಲಿ ಒಂದು ದೊಡ್ಡ ಸಮಾವೇಶ ಆಯೋಜಿಸಲಾಗುತ್ತಿದ್ದು ತಾಲೂಕಿನ ಸಮಸ್ತ ಕನ್ನಡಿಗರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಬಳ್ಳಾರಿ ಜಿಲ್ಲಾ ಕಾರ್ಯದರ್ಶಿ ಖಾದರಬಾಷಾ ಮಾತನಾಡಿ ರೈತರಿಗೆ,ಮಹಿಳೆಯರಿಗೆ,ವಿದ್ಯಾರ್ಥಿಗಳಿಗೆ,ಕೃಷಿ ಕಾರ್ಮಿಕರಿಗೆ ಉತ್ತಮವಾದ ಜೀವನ ನಿರ್ವಹಣೆಗೆ ಅನಾನುಕೂಲದ ವಾತಾವರಣ ನಿರ್ಮಾಣವಾಗಿದೆ ಈ ಎಲ್ಲಾ ಅವ್ಯವಸ್ಥೆಗಳನ್ನು ವಿರೋಧಿಸಿ ಪ್ರತಿಯೊಬ್ಬರು ಉತ್ತಮವಾದ ಜನ ಜೀವನ ಮಾಡುವಂತೆ ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹಲವಾರು ಯೋಜನೆಗಳು ಜನರಿಗೆ ತಲುಪಿಸಿ ಕನ್ನಡಿಗರನ್ನು ಜಾಗೃತಿ ಮೂಡಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದು ಇದಕ್ಕೆ ಕನ್ನಡಪರ,ರೈತಪರ,ಪ್ರಗತಿಪರ ಸಂಘಟನೆಗಳ ಮುಖಂಡರು,ನಾಯಕರು ಬೆಂಬಲಿಸಬೇಕೆಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಪಕ್ಷದ ರಾಜ್ಯ ಸಮಿತಿ ಮುಖಂಡರಾದ ಶ್ರೀನಿವಾಸ ರೆಡ್ಡಿ,ಜಿಲ್ಲಾ ಕಾರ್ಯದರ್ಶಿ ಕಟ್ಟಿ ಬಸಪ್ಪ,ರೈತ ಘಟಕದ ಜಿಲ್ಲಾಧ್ಯಕ್ಷ ಜನಾರ್ಧನ ರೆಡ್ಡಿ, ಸಂಡೂರು ತಾಲೂಕಾಧ್ಯಕ್ಷಮಂಜುನಾಥ್‌ಗೌಳಿ,ಉಪಾಧ್ಯಕ್ಷ ಶರ್ಮಾಸ ವಲಿ,ಪ್ರಧಾನ ಕಾರ್ಯದರ್ಶಿ ರವಿ ನಾಡಿಗೇರ,ಕಾರ್ಯದರ್ಶಿಗಳಾದಮೆಹಬೂಬ್ ಬಾಷಾ,ಪಂಪಾಪತಿ,ರಾಮು ನಾಯಕ, ಇಮಾಮ ಬಾಷಾ, ಯುವ ಘಟಕದ ಪ್ರಧಾನ ಕಾರ್ಯದರ್ಶಿಸೂರ್ಯನಾರಾಯಣ,ಕೂಡ್ಲಿಗಿ ಅಧ್ಯಕ್ಷ ಶರಣಪ್ಪ,ಲೋಕೇಶ್,ಉಪಾಧ್ಯಕ್ಷ ಮಂಜುನಾಥ್,ಮೋಹನ್, ಹುಚ್ಚುಸಾಬ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಪ್ರತಾಪ್.ವಾಯ್. ಕಿಳ್ಳಿ.ಇಲಕಲ್ಲ

ಶೈಕ್ಷಣಿಕ, ಸಾಮಾಜಿಕವಾಗಿ ಹಿಂದುಳಿದ ವಾಲ್ಮೀಕಿ ಸಮಾಜ ಬೆಳೆಸಬೇಕು: ಸಚಿವ ಜಾರಕಿಹೊಳಿ

ಜಮಖಂಡಿ : ಶೈಕ್ಷಣಿಕ, ಸಾಮಾಜಿಕವಾಗಿ ಹಿಂದುಳಿದ ವಾಲ್ಮೀಕಿ ಸಮಾಜವನ್ನು ಮೇಲೆತ್ತುವ ಮೂಲಕ ಅದನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ನಗರದ ಬಸವ ಭವನದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ಮಹಾಸಭಾ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಅಭಿವೃದ್ಧಿಗಾಗಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಸಮಾಜದ ಸ್ಥಿತಿಯನ್ನು ಸುಧಾರಿಸುವುದರ ಬಗ್ಗೆ ಚರ್ಚಿಸುವ ಕೆಲಸವಾಗಬೇಕಿದೆ ಎಂದರು. ಡಾ.ಅಂಬೇಡ್ಕರ ನೀಡಿರುವ ಸಂವಿಧಾನದ ಫಲವಾಗಿ ಇಂದು ಇಂತಹ ಸಮಾಜಗಳು ಬೆಳಕಿಗೆ ಬಂದಿವೆ. ಸರ್ಕಾರವು ಅನೇಕ ಯೋಜನೆಗಳನ್ನು, ಸಾಲ ಸೌಲಭ್ಯಗಳನ್ನು ಸಮಾಜಕ್ಕೆ ನೀಡಿದ್ದು, ಅವೆಲ್ಲದರ ಸದುಪಯೋಗ ಪಡಿಸಿಕೊಂಡು ಆರ್ಥಿಕ, ಸಾಮಾಜಿಕ, ರಾಜಕೀಯವಾಗಿ ಸಮಾಜ ಮುಂದಕ್ಕೆ ಬರಬೇಕು ಆ ದಿಶೆಯಲ್ಲಿ ಕೆಲಸಗಳು ನಡೆಯಬೇಕು. ಮಹರ್ಷಿ ವಾಲ್ಮೀಕಿ ಅವರ ಮಾರ್ಗದರ್ಶನದಲ್ಲಿ ನಡೆಯಬೇಕು. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು.

ಮಾಜಿ ಶಾಸಕ ಶ್ರೀಕಾಂತ ಕುಲಕರ್ಣಿ ಮಾತನಾಡಿ, ದೇಶದಲ್ಲಿ ಜಾತೀಯತೆ ಹೆಚ್ಚುತ್ತಿದ್ದು, ರಾಜಕೀಯ ಲಾಭಕ್ಕಾಗಿ ಜಾತಿಗಳನ್ನು ಒಡೆದು ಹಾಕುವ ಕೆಲಸ ನಡೆಯುತ್ತಿದೆ.

ನಮ್ಮ ಮನೆಗಳಲ್ಲಿ ಯಾವುದೇ ಸಂಪ್ರದಾಯ ಆಚರಣೆಗಳು, ದೇವರ ಪೂಜೆಗಳಿದ್ದರೂ ನಾವೆಲ್ಲರೂ ಹಿಂದೂಗಳು. ನಾವೆಲ್ಲರೂ ಸನಾತನ ಧರ್ಮದವರೆಂಬ ಭಾವನೆಗಳು ಬರಬೇಕಿದೆ. ರಾಮಾಯಣ ಮಹಾಕಾವ್ಯ ರಚಿಸಿರುವ ವಾಲ್ಮೀಕಿ ಮಹರ್ಷಿಗಳು ಶ್ರೀರಾಮ ಕ್ಷತ್ರಿಯ, ಶ್ರೀಕೃಷ್ಣ ಗೊಲ್ಲರ ಕುಲದವನು. ಅವರನ್ನು ಪೂಜಿಸುವವರು ಬ್ರಾಹ್ಮಣರು. ಜನಿವಾರ ಧರಿಸುವವರು ಮಾತ್ರ ಹಿಂದುಗಳು ಎಂಬ ಭಾವನೆಯನ್ನು ಬಿತ್ತುವ ಕೆಲಸ ನಡೆದಿದೆ. ಹಿಂದು ಎಂದರೆ ಅದು ಜಾತಿಯ ಪ್ರತೀಕ ಅಲ್ಲ. ಅದೊಂದು ಜೀವನ ಪದ್ಧತಿಯಾಗಿದೆ. ಉಳಿದೆಲ್ಲ ಸಂಸ್ಕೃತಿಗಳಿಗೆ ಆಧಾರಗಳಿವೆ. ಆದರೆ ಹಿಂದು ಮಾತ್ರ ಸನಾತನ, ಆದಿ ಅಂತ್ಯ ರಹಿತ ಪದ್ಧತಿಯಾಗಿದೆ.

ದೇವ ನಿರ್ಮಿತ ದೇಶ ಭಾರತ ಹದಿನೈದು ಲಕ್ಷ ವರ್ಷಗಳ ಹಿಂದೆ ಶ್ರೀರಾಮ ಸೇತು ನಿರ್ಮಾಣವಾಗಿದೆ ಎಂದು ವಿಜ್ಞಾನಿಗಳು ಕಂಡು ಹಿಡಿದಿದ್ದಾರೆ. ಮಹಾತ್ಮಾ ಗಾಂಧಿ ಅವರು ಭಾರತವನ್ನು ದೇವರನಾಡು ಎಂದು ಕರೆದಿದ್ದಾರೆ. ವಿಶ್ವದಲ್ಲಿ ಭಾರತ ಅತ್ಯಂತ ಬಲಿಷ್ಠ ಮತ್ತು ಶ್ರೀಮಂತ ರಾಷ್ಟ್ರವಾಗಲಿದೆ. ಸಾಧು ಸಂತರ ಮಾರ್ಗ ದರ್ಶನದಲ್ಲಿ ಒಗ್ಗಟ್ಟಿನಿಂದ ರಾಷ್ಟ್ರಕಟ್ಟಲು ಎಲ್ಲರೂ ಮುಂದಾಗಬೇಕಿದೆ ಎಂದರು.

ಜ್ಞಾನ ಭೂಮಿಯನ್ನಾಗಿಸಿದವರು ಸಿದ್ಧಾರೂಢರು

ರಬಕವಿ ಬನಹಟ್ಟಿ : ಸಿದ್ಧಾರೂಢರು ತಮ್ಮಲ್ಲಿರುವ ಜ್ಞಾನದಿಂದ ಭರತ ಭೂಮಿಯನ್ನು ಜ್ಞಾನ ಭೂಮಿಯನ್ನಾಗಿಸಿದ್ದಾರೆ ಎಂದು ಸಮೀಪದ ಹನಗಂಡಿ ಗ್ರಾಮದ ರಾಮಾವಧೂತ ಮಠದ ಚಿದಾನಂದ ಅವಧೂತರು ತಿಳಿಸಿದರು.

ಅವರು ಗುರುವಾರ ಇಲ್ಲಿನ ಅಕ್ಕಲಕೋಟ ಶರಣರು ಸ್ಥಾಪಿಸಿದ ಸಿದ್ಧಾರೂಢ ಮಠದಲ್ಲಿ ಸಿದ್ಧಾರೂಢರ ಚರಿತಾಮೃತ ಪಾರಾಯಣ ಸಮಾರೋಪ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಾತ್ಮರು ತಮ್ಮ ನಡೆ ನುಡಿಗಳಿಂದ ಸಮಾಜದಲ್ಲಿ ಪರಿವರ್ತನೆ ತರುವ ಕಾರ್ಯವನ್ನು ಮಾಡುತ್ತಾರೆ. ಇಂದಿನ ದಿನಗಳಲ್ಲಿ ಸತ್ಸಂಗ ನಡೆಸುವುದು ಮಹತ್ವದ ಕಾರ್ಯವಾಗಿದೆ. ತಾಯಂದಿರು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವ ದಿಶೆಯಲ್ಲಿ ಗಮನ ನೀಡಬೇಕು.

ಅನಂತ ಜನ್ಮಗಳ ಪುಣ್ಯದಿಂದ ಮನುಷ್ಯ ಜನ್ಮವನ್ನು ಪಡೆಯಲಾಗಿರುತ್ತದೆ. ಈ ಮನುಷ್ಯ ಜನ್ಮವನ್ನು ಸಾರ್ಥಕ ಪಡಿಸಿಕೊಳ್ಳಬೇಕು. ಅದಕ್ಕಾಗಿ ಇಂಥ ಸತ್ಸಂಗಗಳು ಅಗತ್ಯವಾಗಿವೆ ಎಂದು ಚಿದಾನಂದ ಅವಧೂತರು ತಿಳಿಸಿದರು.

ಬೈಲಹೊಂಗಲದ ಮಹಾದೇವ ಸರಸ್ವತಿ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಶಿವಾನಂದ ಬುದ್ನಿ ಶರಣರು ಉಪಸ್ಥಿತರಿದ್ದರು. ರಾಜು ಬಾಣಕಾರ, ಮಲ್ಲೇಶಪ್ಪ ಕುಚನೂರ, ರವಿ ಕೊಣ್ಣೂರ, ರಮೇಶ ಕೊಣ್ಣೂರ, ರಮೇಶ ಸೋರಗಾಂವಿ, ಪ್ರಕಾಶ ಬುರುಡ, ಮಹಾಲಿಂಗ ಚಿಮ್ಮಡ, ಶೈಲಾ ನುಚ್ಚಿ, ಮಹಾನಂದ ಕುಳ್ಳಿ, ರಜನಿ ಶೇಠೆ, ಅರಳಿಕಟ್ಟಿ, ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

ಪ್ರಜ್ಞಾವಂತ ಸಮಾಜದ ನಿರ್ಮಾಣಕ್ಕೆ ಆದ್ಯತೆ

ಬನಹಟ್ಟಿ : ಇಂದಿನ ದಿನಗಳಲ್ಲಿ ಪ್ರಜ್ಞಾವಂತ ಸಮಾಜವನ್ನು ನಿರ್ಮಾಣ ಮಾಡುವುದು ಶಿಕ್ಷಕರ ಮೇಲಿರುವ ಮಹತ್ತರ ಜವಾಬ್ದಾರಿಯಾಗಿದೆ. ಶಿಕ್ಷಕರು ತಮ್ಮ ಪ್ರತಿಯೊಬ್ಬ ವಿದ್ಯಾರ್ಥಿಗಳ ಬುದ್ಧಿಮತ್ತೆಯನ್ನು ಅರಿತುಕೊಂಡುಪಾಠಮಾಡಬೇಕೆಂದುಮುಧೋಳದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂಗ್ಲ ಭಾಷೆಯ ಉಪನ್ಯಾಸಕ ಪರಪ್ಪ ಮಗದುಮ್ಮ ತಿಳಿಸಿದರು.

ಅವರು ಶುಕ್ರವಾರ ಇಲ್ಲಿನ ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯದ ವಾರ್ಷಿಕ ಸ್ನೇಹ ಸಮ್ಮೇಳನ ಮತ್ತು ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಶಿಕ್ಷಕರು ಮೊದಲು ತಮ್ಮ ವೃತ್ತಿಯನ್ನು ಗೌರವಿಸಬೇಕು. ತಾವು ಕಲಿಸುವ ವಿಷಯವನ್ನು ಪ್ರೀತಿಸಬೇಕು. ತಮ್ಮ ವಿಷಯದ ಬಗ್ಗೆ ಆಳವಾದ ಅಧ್ಯಯನ ಮಾಡಬೇಕು. ಒಳ್ಳೆಯ ಪುಸ್ತಕಗಳ ಓದು,

ಉತ್ತಮ ಕೌಶಲ, ಶುದ್ಧವಾದ ಭಾಷೆ ಮತ್ತು ಶ್ರೇಷ್ಠವಾದ ಜ್ಞಾನವನ್ನು ಶಿಕ್ಷಕರಾದವರು ತಮ್ಮಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮಗದುಮ್ ತಿಳಿಸಿದರು. ಜಮಖಂಡಿಯ ಓಲೆಮಠದ ಆನಂದ ದೇವರು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಆತ್ಮಬಲ ಮುಖ್ಯವಾಗಿದೆ. ತಾವು ಆಯ್ದುಕೊಂಡ ಕ್ಷೇತ್ರದಲ್ಲಿ ಶ್ರೇಷ್ಠ ಸಾಧನೆಯನ್ನು ಮಾಡಬೇಕು. ನಮ್ಮ ಜೀವನವು ಬೇರೆಯವರಿಗೆ ಮಾದರಿಯಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಜೆಎಸ್ಎಸ್ ಸಂಘದ ಆಡಳಿತ ಮಂಡಳಿಯ ಸದಸ್ಯ ಭೀಮಶಿ ಮಗದುಮ್, ಮಲ್ಲಿಕಾರ್ಜುನ ಬಾಣಕಾರ ಮಾತನಾಡಿದರು.

ಮುಹಮ್ಮದ ಅಲಿ ಶಾಂತಗೇರಿ ಪೈಗಂಬರವಾಸಿ

ಇಳಕಲ್ : ನಗರದ ಫತ್ತೇಶಹಾ ಮಸ್ಜಿದ್ ಜಮಾತ ಮಾಜಿ ಛೇರ್ಮನ್ಮುಹಮ್ಮದ್ಅಲಿಮೋದೀನಸಾಬಶಾಂತಗೇರಿ (98) ಗುರುವಾರ ಬೆಳಗ್ಗೆ ಪೈಗಂಬರ ವಾಸಿಗಳಾದರು.

ಅವರಿಗೆ ಎರಡು ಗಂಡು, ನಾಲ್ಕು ಜನ ಹೆಣ್ಣುಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ. ಇವರ ನಿಧನಕ್ಕೆ ಫತ್ತೇಶಹಾ ಮಸ್ಜಿದ್ ಜಮಾತ ಅಧ್ಯಕ್ಷ ಯಾಸೀನಸಾಬ ಬಡೆಖಾಲ್, ವೈಸ್ ಛೇರ್ಮನ್ ಎ ವಾಯ್ ಕರ್ನೂಲ್ ಸೇರಿದಂತೆ ಅಪಾರ ಬಂಧುಗಳು ಸಂತಾನ ವ್ಯಕ್ತಪಡಿಸಿದರು.

ಶೈಕ್ಷಣಿಕ, ಸಾಮಾಜಿಕವಾಗಿ ಹಿಂದುಳಿದ ವಾಲ್ಮೀಕಿ ಸಮಾಜ ಬೆಳೆಸಬೇಕು: ಸಚಿವ ಜಾರಕಿಹೊಳಿ



ಜಮಖಂಡಿ : ಶೈಕ್ಷಣಿಕ, ಸಾಮಾಜಿಕವಾಗಿ ಹಿಂದುಳಿದ ವಾಲ್ಮೀಕಿ ಸಮಾಜವನ್ನು ಮೇಲೆತ್ತುವ ಮೂಲಕ ಅದನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನಗರದ ಬಸವ ಭವನದಲ್ಲಿ ಶುಕ್ರವಾರ ಅಖಿಲ ಕರ್ನಾಟಕ ವಾಲ್ಮೀಕಿ ಮಹಾಸಭಾ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಅಭಿವೃದ್ಧಿಗಾಗಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಸಮಾಜದ ಸ್ಥಿತಿಯನ್ನು ಸುಧಾರಿಸುವುದರ ಬಗ್ಗೆ ಚರ್ಚಿಸುವ ಕೆಲಸವಾಗಬೇಕಿದೆ ಎಂದರು.

ಡಾ.ಅಂಬೇಡ್ಕರ ನೀಡಿರುವ ಸಂವಿಧಾನದ ಫಲವಾಗಿ ಇಂದು ಇಂತಹ ಸ

ತೆರಬಂಡಿ ಸ್ಪರ್ಧೆಗೂ ಹೆಚ್ಚಿನ ಮಾನ್ಯತೆ ಸಿಗಲಿ–ಸಿದ್ದು ಪಾಟೀಲ

ಮಹಾಲಿಂಗಪುರ : ತೆರಬಂಡಿ ಸ್ಪರ್ಧೆಯು ಗ್ರಾಮೀಣ ಭಾಗದ ರೈತರ ಹಬ್ಬದಂತಾಗಿದ್ದು, ದಕ್ಷಿಣ ಕನ್ನಡದ ಕಂಬಳದಂತೆ ಉತ್ತರ ಕರ್ನಾಟಕದ ತೆರಬಂಡಿ ಸ್ಪರ್ಧೆಗೂ ಹೆಚ್ಚಿನ ಮಾನ್ಯತೆ ಸಿಗಬೇಕಾಗಿದೆ ಎಂದು ಬಿಜೆಪಿ ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷ ಸಿದ್ದುಗೌಡ ಪಾಟೀಲ ಹೇಳಿದರು.

ಸಮೀಪದ ಬಿಸನಾಳ ಗ್ರಾಮದಲ್ಲಿ ವರಸಿದ್ಧಿ ವಿನಾಯಕ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ತೆರಬಂಡಿ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಸ್ಪರ್ಧೆಯಲ್ಲಿ ವಿವಿಧ ಗ್ರಾಮಗಳಿಂದ ನಾಲ್ವತ್ತಕ್ಕೂ ಅಧಿಕ ಎತ್ತಿನ ಜೋಡಿಗಳು ಭಾಗವಹಿಸಿದ್ದವು. ಸೈದಾಪೂರ ಗ್ರಾಮ ಪಂಚಾಯತ್ ಅಧ್ಯಕ್ಷ ಮಹಾಲಿಂಗಪ್ಪ ಸನದಿ ಮಾತನಾಡಿದರು.

ಸೈದಾಪೂರ ಗ್ರಾಮ ಪಂಚಾಯತ್ ಸದಸ್ಯರಾದ ಚಿನ್ನಪ್ಪ ಬಾಯಪ್ಪಗೋಳ, ಯಮನು ಉಪ್ಪಾರ, ಬಿಸನಾಳ ಗ್ರಾಮದ ಹಿರಿಯರಾದ ಪ್ರಕಾಶ ಚನ್ನಾಳ, ಬಸವರಾಜ ಶಿರೋಳ, ಸೋಮು ವಾಲಿ, ಮಹಾಲಿಂಗ ಶಿರೋಳ, ಲಕ್ಷ್ಮಣ ಮೋಪಗಾರ ಸೇರಿದಂತೆ ವರಸಿದ್ಧಿ ವಿನಾಯಕ ಸಮಿತಿಯ ಪದಾಧಿಕಾರಿಗಳು ಭಾಗವಹಿಸಿದ್ದರು.

ಅವಿರೋಧ ಆಯ್ಕೆ

ಮಹಾಲಿಂಗಪುರ : ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರರ ಪತ್ತಿನ ಸಹಕಾರಿ ಸಂಘ ನಿ, ಜಮಖಂಡಿ ಇದರ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಮಹಾಲಿಂಗಪುರ ಉಪ ವಿಭಾಗದಿಂದ ಸ್ಪರ್ಧಿಸಿದ್ದ ಸ್ಥಳೀಯ ಹೆಸ್ಕಾಂನ ಸಹಾಯಕ ಅಭಿಯಂತರ ರಾಜೇಶ್ ಬಾಗೋಜಿ ಅವಿರೋಧ ಆಯ್ಕೆಯಾಗಿದ್ದಾರೆ.

ಅವರಿಗೆ ಮಹಾಲಿಂಗಪುರ ಹೆಸ್ಕಾಂ ಉಪ ವಿಭಾಗದ ಸಮಸ್ತ ನೌಕರರು, ಸಿಬ್ಬಂದಿ, ಗುತ್ತಿಗೆದಾರರು ಅಭಿನಂದಿಸಿದ್ದಾರೆ.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ

ನವನಗರದ ಉದ್ಯಾನವನ ಸ್ವಚ್ಛತಾ ಕಾರ್ಯಕ್ರಮ

ಬಾಗಲಕೋಟೆ : ಕರ್ನಾಟಕ ರಾಜ್ಯ ಮಾಲಿನ್ಯನಿಯಂತ್ರಣಮಂಡಳಿಯ ಸುವರ್ಣ ಮಹೋತ್ಸವ ಹಿನ್ನಲೆಯಲ್ಲಿ ನವನಗರದ ಸೆಕ್ಟೆರ ನಂ.37ರಲ್ಲಿರುವ ಸಾರ್ವಜನಿಕರ ಉದ್ಯಾನವನವ ಸ್ವಚ್ಛತಾ ಕಾರ್ಯಕ್ರಮ ಜರುಗಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕಾರ್ತಿಕ ಆಗ್ರೋ ಇಂಡಸ್ಟ್ರೀಸ್ ಉದ್ದಿಮೆ ಸಹಯೋಗದಲ್ಲಿ ಹಮ್ಮಿಕೊಂಡ ಸ್ವಚ್ಛತಾ ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಕಾರ್ಖಾನೆಗಳ ಸಿಬ್ಬಂದಿಗಳು ಸೇರಿ 40 ಕ್ಕೂ ಹೆಚ್ಚು ಜನ ಸ್ವಚ್ಛತಾ ಕಾರ್ಯದಲ್ಲಿ ತೊಡಗಿದ್ದರು.

ಸ್ವಚ್ಛತಾ ಕಾರ್ಯದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿ ಅನೀಲಕುಮಾರ ಚಳಗೇರಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಸುರೇಶ ತೆಗ್ಗಿ, ಮೆ. ಕಾರ್ತಿಕ್ ಆಗ್ರೋ ಇಂಡಸ್ಟ್ರೀಸ್ ಲಿ. ಉದ್ದಿಮೆಯ ವ್ಯವಸ್ಥಾಪಕ ವೈಭವ ಯಾದವ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಪ್ರಯತ್ನಿಸುವೆ: ಸವದಿ

ರಬಕವಿ–ಬನಹಟ್ಟಿ : ರಬಕವಿ ಬನಹಟ್ಟಿ ಪ್ರದೇಶದಲ್ಲಿ ವಾಲ್ಮೀಕಿ ಸಮುದಾಯ ಭವನವನ್ನು ನಿರ್ಮಾಣ ಮಾಡಲು ಸೂಕ್ತ ಸ್ಥಳವನ್ನು ನೀಡುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುವುದು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು. ಅವರು ಬನಹಟ್ಟಿಯ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಬಕವಿ ಬನಹಟ್ಟಿ ತಾಲ್ಲೂಕು ಘಟಕದ ಆಶ್ರಯದಲ್ಲಿ ನಡೆದ ವಾಲ್ಮೀಕಿ ಜಯಂತ್ಯೋತ್ಸವದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಗತ್ತಿಗೆ ಅಧ್ಯಾತ್ಮಿಕ ಜ್ಞಾನವನ್ನು ನೀಡಿದವರು ವಾಲ್ಮೀಕಿಯವರು. ಸಿಂಧೂರ ಲಕ್ಷ್ಮಣ, ಮದಕರಿ ನಾಯಕ, ಚಿತ್ರದುರ್ಗದ ನಾಯಕರು, ಹಲಗಲಿಯ ಬೇಡರು, ಏಕಲವ್ಯ, ಶಬರಿ ಮತ್ತು ರಾಜಾ ವೆಂಕಟಪ್ಪ ನಾಯಕ ಇವರೆಲ್ಲರೂ ವಾಲ್ಮೀಕಿ ನಾಯಕ ಸಮುದಾಯದ ಮಹಾನುಭಾವರು. ಇವರ ತತ್ವಾದರ್ಶಗಳನ್ನು ಸಮುದಾಯದ ಜನರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಸ್ಥಳೀಯ ಎಸ್. ಆರ್. ಎ. ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಎಫ್. ಬಿ. ತಳವಾರ ಮಾತನಾಡಿ, ನಾರದ ಮುನಿಗಳ ಮೂಲಕ ಮನಸ್ಸನ್ನು ಪರಿವರ್ತನೆ ಮಾಡಿಕೊಂಡು ಪಾಪದಿಂದ ಮುಕ್ತಿಯನ್ನು ಪಡೆದವರು. ನಾರದ ಮುನಿಗಳೇ ಅವರಿಗೆ ವಾಲ್ಮೀಕಿ ಎಂದು ನಾಮಕರಣ ಮಾಡಿದರು. ವಾಲ್ಮೀಕಿ ನಾಯಕ ಸಮುದಾಯದವರು ತ್ಯಾಗ ಧೈರ್ಯ ಮತ್ತು ಬಲಿದಾನಕ್ಕೆ ಹೆಸರುವಾಸಿಯಾದವರು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಶೀರಾಯ ನಾಯಕ ಮಾತನಾಡಿ, ರಬಕವಿ ಬನಹಟ್ಟಿ ನಗರ ಪ್ರದೇಶದಲ್ಲಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಸ್ಥಳ ನೀಡಬೇಕು ಎಂದು ಆಗ್ರಹಿಸಿದರು.

ವೇದಮೂರ್ತಿ ಶ್ರೀಶೈಲಯ್ಯ ಹಿರೇಮಠ, ಜ್ಯೋತಿಷಿ ಶಂಕರ ಗುರೂಜಿ, ತಹಶೀಲ್ದಾರ್ ಗಿರೀಶ ಸ್ವಾದಿ, ವಿದ್ಯಾ ಧಬಾಡಿ, ದಾನಪ್ಪ ಹುಲಜತ್ತಿ, ಚಿದಾನಂದ ಮಠಪತಿ, ಬಸವರಾಜ ಕೊಣ್ಣೂರ, ಕವಿತಾ ಸಿದ್ದು ಕೊಣ್ಣೂರ, ಕಾಡಪ್ಪ ಮಂಟೂರ, ಪರಸಪ್ಪ ನಾಯಕ, ಹನಮಂತ ನಾಯಕ, ಕಾಶಿನಾಥ ಬಡಚಿ, ಪ್ರಭು ಅಮಾತ್ಯನವರ, ಸುರೇಶ ವಾಲೀಕಾರ, ರಮೇಶ ಮೆಳ್ಳಿಗೇರಿ, ಮಲ್ಲಪ್ಪ ಜಕನೂರ, ರಾಮಪ್ಪ ಚಿನಗುಂಡಿ ಸೇರಿದಂತೆ ರಬಕವಿ ಬನಹಟ್ಟಿ ತಾಲ್ಲೂಕಿನ ವಾಲ್ಮೀಕಿ ನಾಯಕ ಸಮುದಾಯದವರು ಪಾಲ್ಗೊಂಡಿದ್ದರು.

ಉಚಿತ ಕಣ್ಣಿನ ತಪಾಸಣೆ ಶಿಬಿರ

ಬಡವರ ಬಾಳಿಗೆ ಬೆಳಕು ನೀಡುತ್ತಿರುವ ಹುರಕಡ್ಲಿ ಫೌಂಡೇಶನ್: ಸಹಜಾನಂದ ಸ್ವಾಮಿಜಿ



ಮಹಾಲಿಂಗಪುರ : ಉಳ್ಳವರು ಸಮಾಜದಲ್ಲಿನ ಬಡವರು, ಅಂಗವಿಕಲರು, ದೀನ ದಲಿತರಿಗೆ, ರೋಗಿಗಳು ಸೇರಿದಂತೆ ಅವಶ್ಯಕತೆ ಇರುವ ನಿಗ9ತಿಕರಿಗೆ ಮಾಡುವ ಆಹಾರ, ಬಟ್ಟೆ, ಆರೋಗ್ಯ ಸೇರಿದಂತೆ ತ್ರಿವಿಧ ಸೇವೆಯು ಭಗವಂತನಿಗೆ ಸಲ್ಲಿಸುವ ನಿಜವಾದ ಸೇವೆಯಾಗಿದೆ ಎಂದು ಸಹಜಾನಂದ ಸ್ವಾಮಿಜಿ ಹೇಳಿದರು.

ಪಟ್ಟಣದ ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದಲ್ಲಿ ಪುರಸಭೆ ಮಾಜಿ ಉಪಾಧ್ಯಕ್ಷ ಚನ್ನಬಸು ಹುರಕಡ್ಲಿ ಅವರು ತಮ್ಮ ಸಿ. ಎಂ. ಹುರಕಡ್ಲಿ ಫೌಂಡೇಶನ ಹಾಗೂ ಹುಬ್ಬಳ್ಳಿಯ ಎಂ. ಎಂ. ಜೋಶಿ ನೇತ್ರ ವಿಜ್ಞಾನ ಅಂಗ ಸಂಸ್ಥೆ ಹುಬ್ಬಳ್ಳಿ, ದೃಷ್ಟಿಕೇಂದ್ರ ಮಹಾಲಿಂಗಪುರ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಕಣ್ಣು ಮಾನವನ ಪ್ರಮುಖ ಅಂಗವಾಗಿದ್ದು, ಬಡವರಿಗೆ ಉಚಿತವಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆ, ಕನ್ನಡಕಗಳನ್ನು ವಿತರಿಸುತ್ತಿರುವ ಹುರಕಡ್ಲಿ ಅವರ ಸೇವೆ ಅಪಾರವಾದದ್ದು. ತಮ್ಮ ತಂದೆ–ತಾಯಿಗಳ ಸ್ಮರಣಾರ್ಥ ಇಂತಹ ಸಾಮಾಜಿಕ ಸೇವೆಗಳ ಮೂಲಕ ಪುಣ್ಯದ ಬುತ್ತಿ ಕಟ್ಟುತ್ತಿರುವ ಚನಬಸು ಹುರಕಡ್ಲಿ ಅವರಿಗೆ ದೇವರು ಒಳ್ಳೆಯನ್ನು ಮಾಡಲಿ ಎಂದು ಶುಭ ಹಾರೈಸಿದರು.

ಸಾನಿಧ್ಯ ವಹಿಸಿದ್ದ ಗಣಿಯ ಚಿನ್ಮಯಾನಂದ ಸ್ವಾಮಿಜಿ ಮಾತನಾಡಿ, ಪ್ರತಿಯೊಬ್ಬರಿಗೂ ಆರೋಗ್ಯ ಭಾಗ್ಯ, ದಾನ, ಧರ್ಮದ ಮೂಲಕ ಸಮಾಜ ಸೇವೆ ಸಲ್ಲಿಸಬೇಕು. ಕಾಯ ಅಳಿದರೂ ಮಾಡಿದ ಕಾರ್ಯ ಉಳಿಯುತ್ತದೆ ಎಂಬ ಮಾತಿನಂತೆ ಆರೋಗ್ಯ ಸೇವೆ ನೀಡುತ್ತಿರುವ ಚನಬಸು ಹುರಕಡ್ಲಿಯವರು ಕಳೆದ ಹದಿನೇಳು ವರ್ಷಗಳಿಂದ ನಿರಂತರ ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡು ಅಂಗವಿಕಲರಿಗೆ ಕೃತಕ ಕೈಕಾಲು ಜೋಡಣೆ, ರಕ್ತದಾನ, ದಂತ ಚಿಕಿತ್ಸೆ, ನೇತ್ರ ತಪಾಸಣೆ ಮತ್ತು ಶಸ್ತ್ರ ಚಿಕಿತ್ಸೆ ಶಿಬಿರಗಳ ಮೂಲಕ ಬಡವರಿಗೆ ಆರೋಗ್ಯ ಭಾಗ್ಯ ನೀಡುತ್ತಿರುವ ಕಾರ್ಯವು ಇತರರಿಗೆ ಮಾದರಿಯಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಿದ್ಧಾರೂಢ ಬ್ರಹ್ಮ ವಿದ್ಯಾಶ್ರಮದ ಸಹಜಾನಂದ ಸ್ವಾಮಿಜಿ, ದೃಷ್ಟಿ ಕೇಂದ್ರ ವ್ಯವಸ್ಥಾಪಕ ರಾಘವೇಂದ್ರ ನವಲಗುಂದ, ಚನಬಸು ಹುರಕಡ್ಲಿ ಮಾತನಾಡಿದರು.

ಪುರಸಭೆ ಅಧ್ಯಕ್ಷ ಯಲ್ಲನಗೌಡ ಪಾಟೀಲ, ಉಪಾಧ್ಯಕ್ಷೆ ಶೀಲಾ ಭಾವಿಕಟ್ಟಿ, ಡಾ. ಎಂ. ಎಚ್. ನಾಯ್ಕ, ಡಾ. ಅಜಿತ ಕನಕರಡ್ಡಿ, ಡಾ. ಮಂಜುನಾಥ ಚನ್ನಾಳ, ಪ್ರಭು ಮೇಟಿ, ಸವಿತಾ ಹುರಕಡ್ಲಿ ಅತಿಥಿಗಳಾಗಿ ಭಾಗವಹಿಸಿದ್ದರು.

ಸಿ. ಎಂ. ಹುರಕಡ್ಲಿ ಫೌಂಡೇಶನ್ ವತಿಯಿಂದ ಹಮ್ಮಿಕೊಂಡ ಬೃಹತ್ ಉಚಿತ ಆರೋಗ್ಯ ಶಿಬಿರದಲ್ಲಿ ವಿವಿಧ ಭಾಗಗಳಿಂದ ಆಗಮಿಸಿದ್ದ ಮುನ್ನೂರಕ್ಕೂ ಅಧಿಕ ಜನರ ಆರೋಗ್ಯ ತಪಾಸಣೆ ಮಾಡಲಾಯಿತು. ಇದರಲ್ಲಿ ಎಪ್ಪತ್ತು ಜನರಿಗೆ ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಶಿಫಾರಸ್ಸು ಮಾಡಲಾಯಿತು. ಇನ್ನೂರಕ್ಕೂ ಹೆಚ್ಚು ಜನರಿಗೆ ಕಣ್ಣಿನ ತಪಾಸಣೆ ನಡೆಸಿ ಉಚಿತ ಕನ್ನಡ ವಿತರಿಸಲು ಆಯ್ಕೆ ಮಾಡಲಾಯಿತು.

ಸ್ಥಳೀಯ ಸಮುದಾಯ ಆಸ್ಪತ್ರೆಯ ಡಾ. ಸೈಯದಾ ನಜೀಮಾ, ಹುಬ್ಬಳ್ಳಿಯ ಜೋಷಿ ಆಸ್ಪತ್ರೆಯ ಡಾ. ಸೌರಭ, ಡಾ. ರಾಘವೇಂದ್ರ, ಪುರಸಭೆ ಸದಸ್ಯೆ ಸವಿತಾ ಹುರಕಡ್ಲಿ, ಬಸವರಾಜ ಹುರಕಡ್ಲಿ, ಸಿದ್ಧು ಧಡೂತಿ, ಬಸವರಾಜ ಗಿರಿಸಾಗರ, ಬಸವರಾಜ ಹುರಕಡ್ಡಿ, ಮಹೇಶ ಈಟಕನ್ನವರ, ಕುಮಾರ ಮನವಡೆ, ರಾಜು ಬೆಳಗಾಂವ್ಕರ್, ಹಣಮಂತ ಜಮಾದಾರ, ಮಹಾಲಿಂಗ ಕಂಠಿ, ಮಲ್ಲಪ್ಪ ಯಾದವಾಡ, ಹಣಮಂತ ಮೀರಾಪಟ್ಟಿ, ಶ್ರೀಕಾಂತ ಪರೀಟ ಸೇರಿದಂತೆ ಇನ್ನೂ ಹಲವರು ಪಾಲ್ಗೊಂಡಿದ್ದರು.

ಶಿವಾನಂದ ಬಿದರಿ ಸ್ವಾಗತಿಸಿ–ನಿರೂಪಿಸಿದರು. ಚಂದ್ರಶೇಖರ ಮೋರೆ ವಂದಿಸಿದರು.

ದೀಪಾವಳಿಯಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು: ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ

ಕೊಪ್ಪಳ : ಜಿಲ್ಲೆಯಲ್ಲಿ ದೀಪಾವಳಿ ಹಬ್ಬವು ಪರಿಸರ ಸ್ನೇಹಿಯಾಗಿ ಹಾಗೂ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸಂಭ್ರಮದಿಂದ ಣೆಯಾಗುವಂತೆಧಿಕಾರಿಗಳು ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿಯ ಕೆ–ಸ್ವಾನ್ ವಿಸಿ ಹಾಲ್‌ನಲ್ಲಿ ದೀಪಾವಳಿ ಹಬ್ಬದ ಅಂಗವಾಗಿ ಕರೆದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮಾತನಾಡಿದರು.

ಸಾರ್ವಜನಿಕರು ತಿರುಗಾಡುವ ರಸ್ತೆಗಳಲ್ಲಿ ಜನರು ಎಲ್ಲೆಂದರಲ್ಲಿ ಪಟಾಕಿಗಳನ್ನು ಸಿಡಿಸಿ ಸಂಚಾರ–ಕ್ಕೆ ತೊಂದರೆ ಮಾಡುವುದು ಹಾಗೂ ಶಬ್ದ ಮಾಲಿನ್ಯ ಮತ್ತು ಆಸ್ಪತ್ರೆ, ಶಾಲೆ ಸೇರಿದಂತೆ ಇತರೆ ಸ್ಥಳಗಳಲ್ಲಿ ಜನರು ಪಟಾಕಿಗಳನ್ನು ಸಿಡಿಸದಂತೆ ನೋಡಿಕೊಳ್ಳಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ನು ಪಾಲನೆ ಮಾಡುತ್ತ ಈ ಹಬ್ಬವನ್ನು ಆಚರಣೆ ಮಾಡೋಣ ಎಂದರು.

ಜನರು ಪರಿಸರ ಸ್ನೇಹಿ ಹಸಿರು ಪಟಾಕಿ ಜೊತೆಗೆ ಮಣ್ಣಿನ ಹಣತೆಯ ದೀಪಗಳಿಂದ ಈ ದೀಪಾವಳಿ ಆಚರಿಸಬೇಕು. ಇದರಿಂದ ಗ್ರಾಮೀಣ ಭಾಗದಲ್ಲಿ ತಯಾರಿಸುವ ಹಣತೆಯಿಂದ ಗ್ರಾಮೀಣ ಪ್ರದೇಶಕ್ಕೆ ಆದಾಯವಾಗುವುದರ ಜೊತೆಗೆ ಯಾವುದೇ ಪರಿಸರ ಮಾಲಿನ್ಯವೂ ಆಗುವುದಿಲ್ಲ.

ಹಸಿರುಪಟಾಕಿಗಳನ್ನುಬಳಸುವಾಗ ಚಿಕ್ಕ ಮಕ್ಕಳು, ವೃದ್ಧರು, ಪ್ರಾಣಿ, ಪಕ್ಷಿಗಳಿಗೆ ತೊಂದರೆಗಳಾಗದಂತೆ ಸಾರ್ವಜನಿಕರು ಮುಂಜಾಗ್ರತೆ ವಹಿಸಬೇಕು ಎಂದರು.

ಆಸ್ಪತ್ರೆ, ಶಾಲಾ–ಕಾಲೇಜುಗಳು ಸೇರಿದಂತೆ ಇತರೆ ನಿಷೇಧಿತ ಪ್ರದೇಶಗಳಲ್ಲಿ ಪಟಾಕಿಗಳನ್ನು ಬಳಸುವಂತಿಲ್ಲ.

ನಮ್ಮಹಿಂದಿನ ಸಂಪ್ರದಾಯದಂತೆ ಮಣ್ಣಿನ ಹಣತೆಗಳಲ್ಲಿ ದೀಪಗಳನ್ನು ಬೆಳಗಿಸುವ ಮೂಲಕ ಈ ಹಬ್ಬವನ್ನು ಆಚರಣೆ ಮಾಡುತ್ತಾ ಬರಲಾಗುತ್ತಿದ್ದು, ಅದರಂತೆ ಈ ವರ್ಷ ಮಣ್ಣಿನ ಹಣತೆಯ ದೀಪಗಳನ್ನು ಬೆಳಗಿಸುವ ಮೂಲಕ ಸ್ಥಳೀಯ ಹಣತೆ ತಯಾರಕರಿಗೆ ಉತ್ತೇಜನ ನೀಡುವುದರ ಜೊತೆಗೆ ಈ ದೀಪಾವಳಿಯನ್ನು ಎಲ್ಲರೂ ಸಂಭ್ರಮ ಮತ್ತು ಸಡಗರದಿಂದ ಜಿಲ್ಲೆಯಲ್ಲಿ ಆಚರಿಸೋಣವೆಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ನಾಗಮಣಿ ಹೊಸಮನಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗೆ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು, ತಾಲ್ಲೂಕು ಪಂಚಾಯತಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕನೇರಿ ಮಠದ ಸ್ವಾಮೀಜಿ ವಿರುದ್ಧ ಕ್ರಮಕ್ಕೆ ಒತ್ತಾಯ

ಕೊಪ್ಪಳ : ಬಸವ ಸಂಸ್ಕೃತಿ ಅಭಿಯಾನ, ಲಿಂಗಾಯತ ಮಠಾಧಿಪತಿಒಕ್ಕೂಟಹಾಗೂಬಸವಧರ್ಮದವರನ್ನು ಕನೇರಿ ಮಠದ ಅದೃಷ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವಮಾನಿಸಿದ್ದು ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ನಗರದ ಅಶೋಕ ವೃತ್ತದಲ್ಲಿ ಶುಕ್ರವಾರ ಕೊಪ್ಪಳ ಜಾಗತಿಕ ಲಿಂಗಾಯತ ಮಹಾಸಭಾ ಮತ್ತು ಬಸವತತ್ವ ಸಂಘಟನೆಗಳ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು.

ಅ. 10ರಂದು ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ ಜತ್ ತಾಲ್ಲೂಕಿನ ಬೀರೂರು ಗ್ರಾಮದ ಬಸವ ಪರಂಪರೆಯ ವಿರಕ್ತ ಮಠದ ಸಾರ್ವಜನಿಕ ಸಭೆಯಲ್ಲಿ ಕೊಲ್ಲಾಪುರ ಹತ್ತಿರದ ಕನೇರಿ ಮಠದ ಸ್ವಾಮೀಜಿ 'ಕರ್ನಾಟಕದ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಪೂಜ್ಯರ ಕುರಿತು ಮತ್ತು ಬಸವ ಸಂಸ್ಕೃತಿ ಅಭಿಯಾನದ ಕುರಿತು ತೀರಾ ಅವಮಾನಕಾರಿ, ಮಾನಹಾನಿಕಾರಕ ಮತ್ತು ಧರ್ಮದ ಹೆಸರಿನಲ್ಲಿ ವಿಭಜನೆ ಮೂಡಿಸಬಹುದಾದ ಪದಗಳನ್ನು ಬಳಕೆ ಮಾಡಿದ್ದಾರೆ. ಇದು ಸರಿಯಲ್ಲ' ಎಂದರು.

ಸಂಘಟನೆಯ ರಾಜ್ಯ ಉಪಾಧ್ಯಕ್ಷ ಬಸವರಾಜ ಬಳ್ಳೊಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜೇಶ ಸಸಿಮಠ, ಯುವಘಟಕದ ಅಧ್ಯಕ್ಷ ಶೇಖರ ಇಂಗಳದಾಳ, ವಿಶ್ವಗುರು ಬಸವೇಶ್ವರ ಟ್ರಸ್ಟ್ ಅಧ್ಯಕ್ಷ ಗುಡದಪ್ಪ ಹಡಪದ, ರಾಷ್ಟ್ರೀಯ ಬಸವದಳ ಅಧ್ಯಕ್ಷ ಶಿವಬಸಯ್ಯ ವೀರಾಪೂರ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಕುಮಾರ ಕುಕನೂರ, ಕಾರ್ಯದರ್ಶಿ ಸೋಮನಗೌಡ ವಗರನಾಳ, ಗಾಣದ ಕಣ್ಣಪ್ಪ ಶಿವಾನುಭವ ಸಮಿತಿ ಅಧ್ಯಕ್ಷ ಶಿವಸಂಗಪ್ಪ ವಣಗೇರಿ, ಕಾರ್ಯದರ್ಶಿ ಶರಣಬಸವನಗೌಡ ಪಾಟೀಲ್, ಮಹಿಳಾ ಘಟಕದ ಅಧ್ಯಕ್ಷೆ ಸೌಮ್ಯನಾಲ್ವಾಡ, ತಾಲ್ಲೂಕು ಬಣಜಿಗ ಮಹ

ಜಾನಪದ ಕಲೆ ಉಳಿಸಿ ಬೆಳೆಸಿ: ಪ್ರೊ.ಬಿ.ಕೆ ರವಿ

ಕುಕನೂರು : ಜಾನಪದದ ಮೂಲ ಸ್ವರೂಪಕ್ಕೆ ಧಕ್ಕೆ ಬಾರದ ರೀತಿಯಲ್ಲಿ ಜಾನಪದವನ್ನು ಅರ್ಥಪೂರ್ಣವಾಗಿ ಬಳಸಿಕೊಳ್ಳಬೇಕು ಹಾಗೂ ಜಾನಪದ ಮುಂದಿನ ಪೀಳಿಗೆಗೆ ದೊರೆಯುವಂತೆ ಮಾಡಬೇಕು ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ ರವಿ ಕರೆ ನೀಡಿದರು.

ತಾಲ್ಲೂಕಿನ ತಳಕಲ್ ಗ್ರಾಮದ ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಗುರುವಾರ ಪ್ರದರ್ಶನ ಕಲೆ ವಿಭಾಗವನ್ನು ಡೊಳ್ಳು ಭಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ವಿದೇಶಿಯರೆಲ್ಲ ಭಾರತೀಯ ಕಲಾ ಶ್ರೀಮಂತಿಕೆಗೆ ತಲೆ ತೂಗಿದ್ದಾರೆ. ಕಲೆ ರಕ್ತವಾಗಿದ್ದು, ಒಂದಷ್ಟು ಆಸಕ್ತಿ ವಹಿಸಿದಲ್ಲಿ ಕಲೆಯಲ್ಲಿ ನೈಪುಣ್ಯತೆ ದೊರೆಯಲಿದೆ. ಕಾರಣ ಎಲ್ಲರೂ ಈ ಕಲೆಯ ಶ್ರೀಮಂತಿಕೆಯನ್ನು ಹೆಚ್ಚಿಸಲು ಶ್ರಮಿಸಬೇಕು ಎಂದರು.

ಜಿಲ್ಲೆ ಸೇರಿದಂತೆ ಕಲ್ಯಾಣ ಕರ್ನಾಟಕದಲ್ಲಿ ಕಲಾವಿದರ ಸಂಖ್ಯೆ ಹೆಚ್ಚಿದೆ. ಹೀಗಾಗಿ ಪ್ರದರ್ಶನ ಕಲೆ ವಿಭಾಗವನ್ನು ಆರಂಭಿಸಿದ್ದು, ಮುಂದಿನ ದಿನಗಳಲ್ಲಿ ಈ ನಾಡಿನ

ಜನರ ಪ್ರದರ್ಶನ ಕಲೆಗಳನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಆಡಳಿತಾಧಿಕಾರಿ ತಿಮ್ಮಾರೆಡ್ಡಿ ಮೇಟಿ ಮಾತನಾಡಿ, ಪ್ರದರ್ಧನ ಕಲೆಯು ನಾಡಿನ ಸಂಸ್ಕೃತಿ, ಪರಂಪರೆಯನ್ನು ಬೆಳೆಸುವ ಕಲೆಯಾಗಿದ್ದು, ಈ ಕಲೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ 'ಮ್ಮ ಮೇಲಿದೆ ಎಂದರು.

ಕಂಸಾಳೆ ನೃತ್ಯ ರೂಪಕ ಪ್ರದರ್ಶನ ನಡೆಯಿತು. ಗಾಯಕಿ ಗೌರಿ ತಂಡದವರು ಹಲವು ಜಾನಪದ ಗೀತೆಗಳನ್ನು ಹಾಡಿದರು.

ಯುವಜನೋತ್ಸವ: ಸುಮಾ, ಶಿವಾನಿಗೆ ಪ್ರಥಮ ಸ್ಥಾನ

ಕೊಪ್ಪಳ : ಇಲ್ಲಿನ ಸಾಹಿತ್ಯ ಭವನದಲ್ಲಿ ಶುಕ್ರವಾರ ನಡೆದ ಜಿಲ್ಲಾಮಟ್ಟದ ಯುವಜನೋತ್ಸವದಲ್ಲಿ ಕಥಾ ವಿಭಾಗದಲ್ಲಿ ಸುಮಾ ಎಂ. ಪ್ರಥಮ ಸ್ಥಾನ ಪಡೆದರೆ, ರೇಷ್ಮಾಬೇಗಂ ವಡ್ಡಟ್ಟಿ ದ್ವಿತೀಯ ಸ್ಥಾನ ಪಡೆದುಕೊಂಡರು. ಚಿತ್ರಕಲಾ ವಿಭಾಗದಲ್ಲಿ ಶಿವಾನಿ ಮೊದಲಿಗರಾದರೆ, ಯಂಕನಗೌಡ ದ್ವಿತೀಯ ಸ್ಥಾನ ಗಳಿಸಿದರು.

ಘೋಷಣೆ ವಿಭಾಗದಲ್ಲಿ ನಡೆದ ಸ್ಪರ್ಧೆಯಲ್ಲಿ ಭೂಮಿಕಾ (ಪ್ರಥಮ), ಅನುಶ್ರೀ (ದ್ವಿತೀಯ), ಕವಿತೆ ಬರೆಯುವ ಸ್ಪರ್ಧೆಯಲ್ಲಿ ಮಾಲಾ ಆರ್.(ಪ್ರಥಮ), ಬಸಮ್ಮ ಬ್ಯಾಳಿ (ದ್ವಿತೀಯ), ವಿಜ್ಞಾನ ವಸ್ತುಗಳ ಪ್ರದರ್ಶನದಲ್ಲಿ ಸ್ವಾಮಿ ವಿವೇಕಾನಂದ ಶಾಲೆಯ ಡಿಸ್ಕವರಿ ಡೈನಮೊ ಪ್ರಾತ್ಯಕ್ಷಿಕೆ ಪ್ರಥಮ ಸ್ಥಾನ ಗಳಿಸಿತು. ಜಾನಪದ ಗೀತೆ ಹಾಡುವ ಗುಂಪು ವಿಭಾಗದಲ್ಲಿ ಕುಷ್ಟಗಿಯ ದೇವರಾಜ ಹಾಗೂ ತಂಡ, ಕೊಪ್ಪಳದ ಜಯಶ್ರೀ ಹಾಗೂ ತಂಡ, ಜಾನಪದ ನೃತ್ಯ ಗುಂಪು ವಿಭಾಗದ ಸ್ಪರ್ಧೆಯಲ್ಲಿ ಕಾರಟಗಿಯ ಅಂಜಲಿ ಹಾಗೂ ತಂಡ ಮತ್ತು ಕೊಪ್ಪಳದ ವೈಷ್ಣವಿ



ಹಾಗೂ ತಂಡ ಕ್ರಮವಾಗಿ ಮೊದಲ ಎರಡು ಸ್ಥಾನಗಳನ್ನು ಪಡೆದುಕೊಂಡವು.

ಪ್ರತಿಭೆ ಗುರುತಿಸಲು ವೇದಿಕೆ: ಇದಕ್ಕೂ ಮೊದಲು ನಡೆದ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ರಾಘವೇಂದ್ರ ಹಿಟ್ನಾಳ 'ರಾಜ್ಯ ಸರ್ಕಾರ ಯುವಸಬಲೀಕರಣಕ್ಕಾಗಿಯುವಜನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದೆ. ಯುವಜನರಲ್ಲಿರುವ ಜನಪದ ಕಲೆ, ಸಾಹಿತ್ಯ ಮತ್ತು ಕ್ರೀಡೆಯಂತಹ ಪ್ರತಿಭೆಗಳನ್ನು ಗುರುತಿಸಲು ಯುವಜನೋತ್ಸವ ವೇದಿಕೆಯಾಗಿದೆ' ಎಂದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ರಾಜ್ಯ ಯುವ ಸಂಘಗಳ ಒಕ್ಕೂಟದ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಿತು. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ತೊಗಲುಗೊಂಬೆಯಾಟ ಕಲಾವಿದೆ ಭೀಮವ್ವ ಶಿಳ್ಳೇಕ್ಯಾತರ ಮಾತನಾಡಿ 'ಇಂದಿನ ಮಕ್ಕಳು ಮತ್ತು ಯುವ ಸಮುದಾಯವು ಮೊಬೈಲ್ ಬಳಕೆಗೆ ಹೆಚ್ಚು ಸಮಯ ವ್ಯಯ ಮಾಡುತ್ತಾರೆ. ಕಲೆ, ಸಾಹಿತ್ಯ ಮತ್ತು ಕ್ರೀಡೆಗಳಲ್ಲಿ ಭಾಗವಹಿಸಿ, ತಮ್ಮಲ್ಲಿರುವ ಪ್ರತಿಭೆಯನ್ನುಪ್ರದರ್ಶಿಸಬೇಕು.ಪೋಷಕರು ತಮ್ಮ ಮಕ್ಕಳಿಗೆ ಹೆಚ್ಚು ಮೊಬೈಲ್ ಬಳಕೆ ಮಾಡದಂತೆ ತಿಳಿ ಹೇಳಬೇಕು' ಎಂದು ಸಲಹೆ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಮಾತನಾಡಿ 'ಯುವಜನತೆ ದುಶ್ಚಟಗಳ ದಾಸರಾಗುವುದು ಹೆಚ್ಚಾಗುತ್ತಿರುವುದು ಕಳವಳಕಾರಿಯಾಗಿದ್ದು, ಇದ–ರಿಂದ ಹೊರಬಂದು ಸಾಧನೆಯತ್ತ ಮುನ್ನುಗ್ಗಬೇಕು' ಎಂದು ಹೇಳಿದರು.

ಕಲಾವಿದ ಶರಣಪ್ಪ ವಡಿಗೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ್ ಬಿ. ಜಾಬಗೌಡರ, ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ತಾಲ್ಲೂಕು ಕ್ರೀಡಾಧಿಕಾರಿ ಶರಬಸಪ್ಪ ಬಂಡಿಹಾಳ, ಬದರಿನಾಥ ಪುರೋಹಿತ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಇನ್ನೂ ಬೆಳೆಯಬೇಕಿದೆ ಉದ್ಯಮ: ಜಿಲ್ಲಾಧಿಕಾರಿ ಸುರೇಶ ಇಟ್ನಾಳ

ಕೊಪ್ಪಳ : 'ನಮ್ಮಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಉದ್ಯಮ ಬೆಳವಣಿಗೆಯಾಗಬೇಕಾದ ಅವಶ್ಯಕತೆಯಿದ್ದು, ಅದಕ್ಕಾಗಿ ಉದ್ಯಮ ಪ್ರಾರಂಭಿಸುವವರಿಗೆ ವಿವಿಧ ಇಲಾಖೆಗಳಿಂದ ಅಗತ್ಯ ಸಹಕಾರ ಸಿಗುತ್ತಿದೆ' ಎಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹೇಳಿದರು.

ಗುರುವಾರ ನಗರದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ ಎಂಎಸ್ಎಂಇಗಳ ಕಾರ್ಯಕ್ಷಮತೆ ಹೆಚ್ಚಿಸುವುದು ಮತ್ತು ವೇಗಗೊಳಿಸುವ ಉದ್ದೇಶದಿಂದ ರ‍್ಯಾಂಪ್ ಯೋಜನೆಯಡಿ ಝಡ್.ಇ.ಡಿ–ಲೀನ್ ಯೋಜನೆ ಕುರಿತು ಹಮ್ಮಿಕೊಂಡಿದ್ದ ಅರಿವು ಕಾರ್ಯಕ್ರಮ ಅವರು ಉದ್ಘಾಟಿಸಿ ಮಾತನಾಡಿದರು.

2011ರ ಜನಗಣತಿ ಪ್ರಕಾರ ಜಿಲ್ಲೆಯಲ್ಲಿ 13.89 ಲಕ್ಷ ಜನ ಇದ್ದು,

ಪ್ರಸ್ತುತ ಅಂದಾಜು 17 ಲಕ್ಷ 15 ಸಾವಿರ ಜನ ಇದ್ದಾರೆ.

ಅದರಲ್ಲಿ ಉದ್ಯಮ ಪ್ರಮಾಣಪತ್ರಕ್ಕೆ ನೋಂದಣಿ ಮಾಡಿಕೊಂಡವರು 4,000 ಜನ ಮಾತ್ರ. ಎಂಎಸ್ಎಂಇಯಲ್ಲಿ ಸಹಾಯಧನ ಪಡೆದವರ ಸಂಖ್ಯೆ ಕಡಿಮೆಯಿದೆ' ಎಂದರು.

ಮೇಕ್ ಇನ್ ಇಂಡಿಯಾ ಯೋಜನೆಯಡಿ ನಾವೆಲ್ಲರೂ ಒಟ್ಟುಗೂಡಿ ಉಪಯುಕ್ತ ಉತ್ಪನ್ನಗಳನ್ನು ಸ್ಥಳೀಯವಾಗಿ ಉತ್ಪಾದಿಸಿ ಹೆಚ್ಚಿನ ಲಾಭ ಪಡೆದು, ದೇಶದ ಜಿಡಿಪಿ ಬೆಳವಣಿಗೆಗೆ ಕೊಡುಗೆ ನೀಡಿದಾಗ ಮೇಕ್ ಇನ್ ಇಂಡಿಯಾ ಯೋಜನೆಗೆ ಅರ್ಥ ಸಿಗುತ್ತದೆ' ಎಂದು ಸಲಹೆ ನೀಡಿ–ದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಮನ್ಸೂರ್ ಅವರು ಮಾತನಾಡಿ'ಎಂಎಸ್ಎಂಇ ಎನ್ನುವುದು ಕೇಂದ್ರ ಸರ್ಕಾರದ ಯೋಜನೆಯಾಗಿದೆ. ಇವುಗಳ ಕಾರ್ಯಕ್ರಮತೆ ಹೆಚ್ಚಿಸುವುದು ಗುರಿಯಾಗಿದೆ.

ದೇಶದ ಜಿಡಿಪಿಯಲ್ಲಿ ಸಣ್ಣ ಕೈಗಾರಿಕ್ಷಾ ಕ್ಷೇತ್ರದ ಪಾಲು ಶೇ. 45ರಷ್ಟು ಇದೆ' ಎಂದು ತಿಳಿಸಿದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಕಾಸಿಯಾ ಉಪಾಧ್ಯಕ್ಷ ಲಿಂಗಣ್ಣ ಎಸ್. ಬಿರಾದಾರ, ಕಾಸಿಯಾ ಜಂಟಿ ಕಾರ್ಯದರ್ಶಿ (ನಗರ) ಕೇಶವ ಮೂರ್ತಿ ಆರ್., ಜಂಟಿ ಕಾರ್ಯದರ್ಶಿ (ಗ್ರಾಮೀಣ) ದಿನೇಶ್ ಕುಮಾರ, ಜಿಲ್ಲಾ ಕಾಸಿಯಾ ಅಭಿವೃದ್ಧಿ ಸಮಿತಿ, ಪ್ಯಾನಲ್ ಅಧ್ಯಕ್ಷೆ ಪುಷ್ಪಲತಾ, ಶಿವಕುಮಾರ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಶೇ 94ರಷ್ಟು ಪೂರ್ಣ: ಜಿಲ್ಲಾಧಿಕಾರಿ

ಗಂಗಾವತಿ : ಇಲ್ಲಿನ ನಗರಸಭೆಯ ಪೌರಾಯುಕ್ತರ ಕಚೇರಿಯಲ್ಲಿ ಶುಕ್ರವಾರ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಅಧಿಕಾರಿಗಳೊಂದಿಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಪ್ರಗತಿ ಮತ್ತು ಉಳಿಕೆ ಸಮೀಕ್ಷೆ ಕುರಿತು ಸಭೆ ನಡೆಸಿದರು.

ನಂತರ ಪತ್ರಕರ್ತರಿಗೆ ಮಾಹಿತಿ ನೀಡಿ, 'ಕೊಪ್ಪಳ ಮತ್ತು ಗಂಗಾವತಿ ನಗರದಲ್ಲಿ ಸಮೀಕ್ಷೆ ಮಾಡುವುದು ಬಾಕಿಯಿದೆ. ಈಗಾಗಲೇ ಶೇ 90ರಷ್ಟು ಸಮೀಕ್ಷೆ ಪೂರ್ಣಗೊಂಡಿದೆ. 2011, 2015ಕ್ಕಿಂತಲೂ ಹೆಚ್ಚಾಗಿ ಸಮೀಕ್ಷೆ ನಡೆಸಲಾಗಿದೆ. ಈ ವರ್ಷದ ಅಂತ್ಯ 17.15 ಲಕ್ಷ ಜನಸಂಖ್ಯೆ ಇರಬೇಕು ಎಂದು ಯೋಜನಾ ಇಲಾಖೆ ವರದಿ ನೀಡಿದೆ. ಆ ಸಂಖ್ಯೆಯನ್ನು ಮುಟ್ಟಲು ಸಮೀಕ್ಷೆ ನಡೆಸಲಾಗುತ್ತಿದೆ. ಜಿಲ್ಲೆಯಾದ್ಯಂತ ಶೇ 94 ರಷ್ಟು ಸಮೀಕ್ಷೆ ಪೂರ್ಣಗೊಂಡಿದೆ' ಎಂದರು.

ಗಂಗಾವತಿ ರಸ್ತೆಗಳ ದುರಸ್ತಿ ಬಗ್ಗೆ ಪ್ರಶ್ನಿಸಿದಾಗ, ಈಗಾಗಲೇ

ಗಂಗಾವತಿ ರಸ್ತೆಗಳ ಬಗ್ಗೆ ಮಾಹಿತಿ ಪಡೆದಿದ್ದೇನೆ. ಗುಂಡಿಗಳು ಎಲ್ಲೆಲ್ಲಿವೆ ಎಂಬುದು ಪರಿಶೀಲಿಸಿ, ತಾತ್ಕಾಲಿಕವಾಗಿ ರಸ್ತೆಗಳು ಸರಿಪಡಿಸುವಂತೆ ಸೂಚನೆ ನೀಡಲಾಗಿದೆ. ನವೆಂಬರ್ 5ರ ನಂತರ ಗಂಗಾವತಿ ನಗರದ ಬಗ್ಗೆ ವಿಶೇಷ ಕಾಳಜಿವಹಿಸಿ, ಇಲ್ಲಿ ಆಗಬೇಕಾದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಸಭೆ ನಡೆಸಿ, ಕ್ರಮಗಳು ಕೈಗೊಳ್ಳಲಾಗುತ್ತದೆ' ಜಿಲ್ಲಾಧಿಕಾರಿ ತಿಳಿಸಿದರು.

ಈ ವೇಳೆ ನಗರಸಭೆ ಪೌರಾಯುಕ್ತ ಆರ್.ವಿರೂಪಾಕ್ಷಮೂರ್ತಿ, ತಹಶೀಲ್ದಾರ್ ಯು.ನಾಗರಾಜ, ಡಿಡಿಪಿಐ ಸೋಮಶೇಖರಗೌಡ, ತಾಲ್ಲೂಕು ಪಂಚಾಯಿತಿ ಇಒ ರಾಮರೆಡ್ಡಿ ಪಾಟೀಲ, ಸಿಡಿಪಿಒ ಜಯಶ್ರೀ, ಬಿಇಒ ನಟೇಶ ಸೇರಿ ನಗರಸಭೆ ಎಂಜಿನಿಯರ್‌ಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

ಕಾಮಗಾರಿಗಳ ಪರಿಶೀಲನೆ: ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಶುಕ್ರವಾರ ಬೆಳಿಗ್ಗೆ ಏಕಾಏಕಿ ಭೇಟಿ ನೀಡಿ, ನಗರಸಭೆ ಕಾರ್ಯಾಲಯ ಆವರಣದಲ್ಲಿ ಅಳವಡಿಕೆ ಮಾಡುತ್ತಿರುವ ಪೇವರ್ಸ್, ಕಚೇರಿ ಒಳಗೆ ಮಾಡುತ್ತಿರುವ ಪಿಒಪಿ ಕಾಮಗಾರಿ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದು, ಕಾಮಗಾರಿ ವೆಚ್ಚದ ದಾಖಲೆಗಳು ಪರಿಶೀಲಿಸಿದರು.

ಆವರಣದಲ್ಲಿ ನಡೆಸಿದ ಚರಂಡಿ ಮತ್ತು ಕಾಮಗಾರಿ ಗುಣಮಟ್ಟತೆ ಪರಿಶೀಲಿಸಿದರು. ಕಿಲ್ಲಾ ಏರಿಯಾದಲ್ಲಿನ ಕೊಳಚೆ ಪ್ರದೇಶಕ್ಕೆ ಮೂಲಸೌಕರ್ಯ ಒದಗಿಸುವ ಮತ್ತು ಅಲ್ಲಿನ ಸಾರ್ವಜನಿಕ ಶೌಚಾಲಯ ಒತ್ತುವರಿಯಾದ ಬಗ್ಗೆ ಮಾಹಿತಿ ಪಡೆದು ಸಂಬಂಧಪಟ್ಟ ಅಧಿಕಾರಿಗಳನ್ನ ತರಾಟೆಗೆ ತೆಗೆದುಕೊಂಡರು.

ಗ್ರಾಮೀಣ ಮಹಿಳಾ ಸಬಲೀಕರಣಕ್ಕೆ ಮತ್ಸ್ಯ ಸಂಜೀವಿನಿ ಸಹಕಾರಿ : ಜಿಪಂ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ

ವಿಜಯಪುರ: ನಗರದ ಜಿಲ್ಲಾ ಪಂಚಾಯತಿ ಜಿಲ್ಲಾ ಸಂಪನ್ಮೂಲ ತರಬೇತಿ ಕೇಂದ್ರ (ಡಿಪಿಆರ್‌ಸಿ) ವಿಜಯಪುರದಲ್ಲಿ ಮೀನುಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಗ್ರಾಮ ಪಂಚಾಯತಿಗೆ ಒಳಪಡುವ ಕೆರೆಗಳಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್‌ಆರ್‌ಎಲ್‌ಎಂ) ಯೋಜನೆ ಅಡಿ ರಚಿಸಲಾದ ಒಕ್ಕೂಟಗಳ ಸ್ವಸಹಾಯ ಸಂಘದ ಮಹಿಳೆಯರಿಗೆ ಸಮಗ್ರ ಮೀನು ಸಾಕಾಣಿಕೆ ವಿಷಯದ ಕುರಿತು 2 ದಿನಗಳ ಕಾಲ ತರಬೇತಿ ಕಾರ್ಯಗಾರಕ್ಕೆ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಸ್ವಸಹಾಯ ಸಂಘದ ಮಹಿಳೆಯರ ಸಬಲೀಕರಣಕ್ಕಾಗಿ ವಿವಿಧ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಎನ್‌ಆರ್‌ಎಲ್‌ಎಂ ಯೋಜನೆ ಅಡಿ ಕೈಗೊಳ್ಳಲಾಗುತ್ತಿದ್ದು ಮತ್ಸ್ಯ ಸಂಜೀವಿನಿ ಯೋಜನೆ ಅಡಿ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಡುವ ಕೆರೆಗಳಲ್ಲಿ ಸ್ವಸಹಾಯ ಸಂಘದ ಮಹಿಳೆಯರು ಮೀನು ಸಾಕಾಣಿಕೆ ಮಾಡಲು ಆಸಕ್ತಿ ಮಹಿಳೆಯರಿಗೆ ತರಬೇತಿ ಆಯೋಜಿಸಲಾಗಿದ್ದು ಈ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳಲು ಹಾಗೂ ಮೀನು ಸಾಕಾಣಿಕೆ ಮಾಡಿ ಹೆಚ್ಚಿನ ಆದಾಯವನ್ನು ಪಡೆದುಕೊಳ್ಳಲು ತಿಳಿಸಿದರು.

ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಎಮ್.ಎಚ್. ಬಾಂಗಿ ಮಾತನಾಡಿ, ಮೀನು ಸಾಕಾಣಿಕೆ ಮಾಡಲು ಇಲಾಖೆಯಿಂದ ಸಬ್ಸಿಡಿ ರೂಪದಲ್ಲಿ ಮೀನುಗಳನ್ನು ನೀಡಲಾಗುತ್ತಿದ್ದು, ಜಿಲ್ಲೆಯಲ್ಲಿ ಮೀನು ಸಾಕಾಣಿಕೆ ಮಾಡಿ ಆರ್ಥಿಕ ಇಳುವರಿ ಲಾಭ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಿರುವ ಅನೇಕ ಫಲಾನುಭವಿಗಳ ನಮ್ಮ ಜೊತೆ ಇದ್ದಾರೆ.

ಆ ನಿಟ್ಟಿನಲ್ಲಿ ನಿಮಗೆ ಬೇಕಾದ ಎಲ್ಲಾ ರೀತಿಯ ಸಹಾಯ ಸಹಕಾರವನ್ನು ಇಲಾಖೆಯಿಂದ ಮಾಡಲಾಗುತ್ತದೆ ಎಂದರು.

ಮೀನುಗಾರಿಕೆ ಮಾಡಲು ಕನಿಷ್ಠ 6 ತಿಂಗಳ ಕಾಲ ನೀರಿನ ಅವಶ್ಯಕತೆ ಇರುತ್ತದೆ ಮತ್ತು ಮೀನುಗಳ ರಕ್ಷಣೆ ಮತ್ತು ಸಂರಕ್ಷಣೆ ಹಾಗೂ ವೈಜ್ಞಾನಿಕವಾಗಿ ಮೀನುಗಳನ್ನು ಸಾಕಾಣಿಕೆ ಮಾಡಿದ್ದಲ್ಲಿ ಹೆಚ್ಚುವರಿ ಇಳುವರಿ ಪಡೆಯಬಹುದು.

ಸ್ವಸಹಾಯ ಸಂಘದ ಮಹಿಳೆಯರು ಇದರ ಲಾಭವನ್ನು ಪಡೆದುಕೊಳ್ಳಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಭೂತನಾಳ ಆರ್‌ಐಸಿ ಮುಖ್ಯಸ್ಥ ಡಾ. ವಿಜಯಕುಮಾರ ಮಾತನಾಡಿ, ಮತ್ಸ್ಯ ಸಂಜೀವಿನಿ ಯೋಜನೆಯು ಮೀನುಗಾರಿಕೆ ವಲಯವನ್ನು ಬಲಪಡಿಸುವ ಮತ್ತು ಗ್ರಾಮೀಣ ಮಹಿಳೆಯರನ್ನು ಸಬಲೀಕರಣಗೊಳಿಸುವತ್ತ ಒಂದು ಮಹತ್ವದ ಹೆಜ್ಜೆಯಾಗಿದೆ.

ಸಣ್ಣ ನೀರಾವರಿ ಕೆರೆಗಳಲ್ಲಿ ಮೀನು ಸಾಕಾಣಿಕೆಯನ್ನು ಉತ್ತೇಜಿಸುವ ಮೂಲಕ ಮತ್ತು ಮಹಿಳಾ ಸ್ವಸಹಾಯ ಗುಂಪುಗಳನ್ನು ಒಳಗೊಳ್ಳುವ ಮೂಲಕ, ಈ ಯೋಜನೆಯ ಮೀನು ಉತ್ಪಾದನೆ ಮತ್ತು ಸ್ಥಳೀಯ ಆಹಾರ ಭದ್ರತೆಯನ್ನು ಹೆಚ್ಚಿಸುವುದಲ್ಲದೆ, ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸುತ್ತದೆ.

ಮೀನುಗಾರಿಕೆ ಸಂಬಂಧಿತ ಯೋಜನೆಗಳು ಆದಾಯದ ಮೂಲಗಳನ್ನು ಹೇಗೆ ವೈವಿಧ್ಯಗೊಳಿಸುವುದು ಮತ್ತು ಗ್ರಾಮೀಣ ಉದ್ಯಮಶೀಲತೆಯನ್ನು ಉತ್ತೇಜಿಸಬಹುದು ಎಂಬುದನ್ನು ಪ್ರದರ್ಶಿಸುತ್ತದೆ. ಮತ್ಸ್ಯ ಸಂಜೀವಿನಿ ಕುರಿತು ಸಮಗ್ರ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಪಂ ಸಹಾಯಕ ಯೋಜನಾಧಿಕಾರಿ ಅರುಣಕುಮಾರ ದಳವಾಯಿ, ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರುಗಳಾದ ಶ್ರೀಶೈಲ ಗಂಗನಾಳ, ಜಿ.ಎಸ್. ಬಿರಾದಾರ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ವಿಶ್ವನಾಥ ಶಹಾಪುರ, ಯುವ ವೃತ್ತಿಪರರಾದ ವಿಜಯಲಕ್ಷ್ಮಿ ಪ್ರಧಾನಿ, ಸೌಪರ್ಣಿಕ ಕೊಪ್ಪಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬಿಎಲ್‌ಡಿಇ ಡೀಮ್ಡ್ ವಿವಿ ಆಸ್ಪತ್ರೆಯಲ್ಲಿ ವಿಶ್ವ ಅಂಗ ರಚನಾ ಶಾಸ್ತ್ರ ದಿನ

ವಿಜಯಪುರ : ವಿಶ್ವ ಅಂಗರಚನಾ ಶಾಸ್ತ್ರ ದಿನದ ಅಂಗವಾಗಿ ನಗರದ ಬಿ.ಎಲ್.ಡಿ.ಇ ಡೀಮ್ ವಿಶ್ವವಿದ್ಯಾಲಯದ ಶ್ರೀ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಹಾಗೂ ಸಂಶೋಧನೆ ಕೇಂದ್ರದ ಅಂಗರಚನಾ ಶಾಸ್ತ್ರ ವಿಭಾಗದಿಂದ ಸಪ್ತಾಹ ಆಚರಿಸಲಾಯಿತು.

ಈ ಸಪ್ತಾಹದ ಕೊನೆಯ ದಿನವಾದ ಶುಕ್ರವಾರ ಡೀಮ್ಡ್ ವಿವ

ರಾಷ್ಟ್ರೀಯ ರೈತ ಮಹಿಳಾ ದಿನಾಚರಣೆ

ವಿಜಯಪುರ: ಇತ್ತೀಚೆಗೆ ವಿಜಯಪುರ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜಿಲ್ಲೆಯ ರೈತ ಮಹಿಳೆಯರೊಂದಿಗೆ ರಾಷ್ಟ್ರೀಯ ರೈತ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ರೈತಗೀತೆಯೊಂದಿಗೆ ಪ್ರಾರಂಭಿಸಲಾಯಿತು. ಕಾರ್ಯಕ್ರಮದಲ್ಲಿ ಎಲ್ಲ ಅಧಿಕಾರಿ–ಸಿಬ್ಬಂದಿಗಳು, ರೈತ ಮಹಿಳೆಯರಿಂದ ಹಣ್ಣಿನ ಸಸಿ ನೆಡಲಾಯಿತು. ಕಾರ್ಯಕ್ರಮದಲ್ಲಿ ಸಹಾಯಕ ಕೃಷಿ ನಿರ್ದೇಶಕಿ ವಿಜಯಲಕ್ಷ್ಮೀ ಎಸ್. ಚವ್ಹಾಣ ಹಾಗೂ ಪಾರ್ವತಿ ಪಾಟೀಲ ಅವರು ಮಾತನಾಡಿ, 2016ರಲ್ಲಿ ಭಾರತ ಸರ್ಕಾರವು ಅಕ್ಟೋಬರ್ 15ನ್ನು ರಾಷ್ಟ್ರೀಯ ಮಹಿಳಾ ಕಿಸಾನ್ ದಿವಸ್ ಎಂದು ಆಚರಿಸಲು ನಿರ್ಧರಿಸಿತು ಎಂದು ಹೇಳಿದರು. ಕೃಷಿ ಅಧಿಕಾರಿಗಳಾದ ಲಕ್ಷ್ಮೀ ಕಾಮಗೊಂಡ, ಫಾತಿಮಾಬನು ಸುತಾರ ಹಾಗೂ ಗೀತಾ ಭಜಂತ್ರಿ ಉಪಸ್ಥಿತರಿದ್ದರು.

ಸರ್ಕಾರಿ ವೈದ್ಯಕೀಯ ಕಾಲೇಜ್: ಸಿಎಂಗೆ ಮನವರಿಕೆ ಮಾಡಿದ್ದೇನೆ: ಸಚಿವ ಶಿವಾನಂದ ಪಾಟೀಲ

ವಿಜಯಪುರ : ಜಿಲ್ಲೆಯಲ್ಲಿ ಖಾಸಗಿ ಸಹಭಾಗಿತ್ವದ ಬದಲಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿಕೊಡಲಾಗಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಹೇಳಿದರು.

ಶುಕ್ರವಾರ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಪ್ರಧಾನ ಕಛೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿಮಾತನಾಡಿದಅವರು, ಬೆಂಗಳೂರಿನಲ್ಲಿ ಮುಖ್ಯಮಂತ್ರಿಗಳು ಮೊನ್ನೆ ಕರೆದಿದ್ದ ಸಚಿವರ ಸಭೆಯಲ್ಲಿ ನಮ್ಮ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು ಮಾತನಾಡಿದ್ದೇನೆ. ಸಿದ್ದರಾಮಯ್ಯ

ಅವರು ಈ ಹಿಂದೆ ಮುಖ್ಯಮಂತ್ರಿಗಳಾಗಿದ್ದಾಗ ನಾನೇ ಮೂರು ಬಾರಿ ಸದನದಲ್ಲಿ ಪ್ರಶ್ನೆ ಮಾಡಿದ್ದೇನೆ ಎಂಬುದನ್ನು ಮುಖ್ಯಮಂತ್ರಿಗಳಿಗೆ ವಿವರಿಸಿದ್ದೇನೆ ಎಂದರು.

400 ಕೋಟಿ ರೂ. ಖರ್ಚಾಗುತ್ತದೆ ಎಂದು ಮುಖ್ಯಮಂತ್ರಿಗಳು ಹೇಳಿದಾಗ ಬೇರೆಯವರು 500 ಕೋಟಿ ರೂ. ಖರ್ಚು ಮಾಡಿದರೂ, ನಮ್ಮ ಜಿಲ್ಲೆಯಲ್ಲಿ ಅದರ ಅರ್ಧಕ್ಕಿಂತ ಕಡಿಮೆ ಖರ್ಚಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಆಗಲಿದೆ ಎಂದು ಮನವರಿಕೆ ಮಾಡಿದ್ದೇನೆ. ವೈದ್ಯಕೀಯ ಶಿಕ್ಷಣ ಸಚಿವರಿಗೂ ಹೇಳಿದ್ದು, ಅವರೂ ಒಪ್ಪಿದ್ದಾರೆ. ಸಚಿವ ಸಂಪುಟ ಸಭೆಯಲ್ಲೂ ಈ ವಿಷಯವನ್ನು ಚರ್ಚೆ ಮಾಡಿದಾಗ ಜಿಲ್ಲಾ ಉಸ್ತುವಾರಿ ಮಂತ್ರಿಗಳೂ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು ಮಾತನಾಡಿದ್ದಾರೆ ಎಂದರು.

ವಿಜಯಪುರ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು ಸ್ವಯಂ ಪ್ರೇರಿತ ಹೋರಾಟ ನಡೆಯುತ್ತಿದೆ. ಯಾವುದೇ ಪ್ರತಿಭಟನೆ ಒಂದು ಬೇಡಿಕೆ ಇಟ್ಟುಕೊಂಡು ನಡೆಯುತ್ತದೆ. ಧರಣಿ ಕುಳಿತವರು ಅಪರಾಧಿ ನಿರಪರಾಧಿ ಎಂದು ಸಂಬೋಧಿಸುವುದು ಸರಿಯಲ್ಲ. ಯಾರದೋ ಕುಮ್ಮಕ್ಕಿನಿಂದ ಹೋರಾಟ ನಡೆಯುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹೇಳಿದ್ದಾರೆ ಎಂದು ಪತ್ರಕರ್ತರು ಪ್ರಶ್ನಿಸಿದಾಗ, ಯಾವ ದೃಷ್ಟಿಕೋನದಲ್ಲಿ ಹೇಳಿದ್ದಾರೋ ನನಗೆ ಗೊತ್ತಿಲ್ಲ, ಅವರನ್ನೇ ಕೇಳಿ ಎಂದರು.

ಖಾಸಗಿ ಸಹಭಾಗಿತ್ವದ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು ನಿರ್ಧರಿಸಿದ್ದು ಬಿಜೆಪಿ ಸರ್ಕಾರದ ಅವಧಿಯಲ್ಲಿ. ನಮ್ಮ ಸರ್ಕಾರದ ಅವಧಿಯಲ್ಲಾಗಿಲ್ಲ. ಈ ಕುರಿತು ಮರು ಪರಿಶೀಲನೆ ಪ್ರಸ್ತಾವನೆ ಸಲ್ಲಿಸಬೇಕಿದ್ದು, ಕಾನೂನು ಪ್ರಕ್ರಿಯೆ ಮುಗಿದ ಮೇಲೆ ಸರಳವಾಗಿ ಕಾಲೇಜು ಸ್ಥಾಪನೆಗೆ ಅವಕಾಶ ಸಿಗಲಿದೆ ಎಂದರು.

ಮೆಕ್ಕೆಜೋಳ ಕ್ಷೇತ್ರೋತ್ಸವದಲ್ಲಿ ಪಯೋನಿರ್ ಬೀಜದ ಉತ್ತಮ ಇಳುವರಿ

ಕೊಲ್ಹಾರ: ತಾಲೂಕಿನ ಮಟ್ಟಿಹಾಳ ಗ್ರಾಮದ ಪ್ರಗತಿಪರ ರೈತ ಮಲ್ಲಿಕಾರ್ಜುನ್ ನಿಂಗಪ್ಪ ಬಿರಾದಾರ್ ಅವರ ಕೃಷಿ ಭೂಮಿಯಲ್ಲಿ ಪಯೋನಿರ್ ಕಂಪನಿಯ ಮೆಕ್ಕೆಜೋಳ ಕ್ಷೇತ್ರೋತ್ಸವ ವಿಜೃಂಭಣೆಯಿಂದ ಜರುಗಿತು.

ಪಯೋನಿರ್ ಕಂಪನಿಯ ಹುಬ್ಬಳ್ಳಿಯ ಖಿಖಿಒ ನಾಗನಗೌಡ ಪಾಟೀಲ್, ಕೊಲ್ಹಾರ ತಾಲೂಕ ಎಂ.ಡಿ.ಆರ್. ಹಣಮಂತ ಮುಳವಾಡ ಹಾಗೂ ವಿಜಯಪುರದ ಖಿಖಿಒ ಗಣೇಶ್ ನಾಯಕ್ ಜಂಟಿಯಾಗಿ ಮಾತನಾಡಿ, ಪಯೋನಿರ್ ಕಂಪನಿಯ ಮೆಕ್ಕೆಜೋಳ ಬೀಜ ಬಿತ್ತಿದರೆ ಪ್ರತಿ ಎಕರೆಗೆ 38 ರಿಂದ 41 ಕ್ವಿಂಟಾಲ್‌ಗಳವರೆಗೆ ಉತ್ತಮ ಇಳುವರಿ ಸಿಗುತ್ತದೆ ಎಂದು ತಿಳಿಸಿದರು. ಅಲ್ಲದೆ, ತೆನೆಯ ತುದಿಯವರೆಗೂ ಸಮಾನಾಂತರ ಕಾಳುಗಳು ರೂಪುಗೊಳ್ಳುವು, 18 ಸಾಲುಗಳ ತೆನೆ, ಲಡ್ಡು ತೆಳುವಾಗಿದ್ದು ಕಾಳು ದಪ್ಪವಾಗಿರುವುದು ಇವುಗಳೆಲ್ಲಾ ಉತ್ತಮ ಇಳುವರಿಗಾಗಿ ಕಾರಣವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ರೈತ ಮಲ್ಲಿಕಾರ್ಜುನ್ ನಿಂಗಪ್ಪ ಬಿರಾದಾರ್ ಮಾತನಾಡಿ, "ನಾನು ಪಯೋನಿರ್ ಕಂಪನಿಯ ಬೀಜವನ್ನು ಬಿತ್ತಿದ್ದೇನೆ. ಕಂಪನಿಯ ತಾಂತ್ರಿಕ ಮಾರ್ಗದರ್ಶನದಿಂದ ಉತ್ತಮ ಬೆಳೆ ಬಂದಿದೆ. ಇಳುವರಿ ಕೂಡ ಅಧಿಕವಾಗಿದೆ. ಇತರ ರೈತರೂ ಈ ಬೀಜವನ್ನು ಬಳಸಿಕೊಂಡು ಹೆಚ್ಚು ಉತ್ಪಾದನೆ ಪಡೆಯಬೇಕು," ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಈರಪ್ಪ ಬಿರಾದಾರ್, ಈಶ್ವರಪ್ಪ ಅರಕೇರಿ, ಹನುಮಂತ್ ತೇಲಿ, ಸುರೇಶ್ ಕುಂಬಾರ್, ಸದಾಶಿವ ಜೋಗಿ, ಸಿದ್ದು ನಿಂಡಗುದಿ, ಮಂಜು ಜೋಗಿ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

ಸ್ವಾತಂತ್ರ್ಯಕ್ಕಾಗಿ ಮಡಿದ ಸಮರವೀರ ಸಂಗೊಳ್ಳಿ ರಾಯಣ್ಣ: ಡಾ. ಮಾಧವ ಗುಡಿ

ವಿಜಯಪುರ: ಸಮರವೀರ ಸಂಗೊಳ್ಳಿ ರಾಯಣ್ಣ ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಅದರಲ್ಲೂ ವಿಶೇಷವಾಗಿ ಕರ್ನಾಟಕದ ಕಿತ್ತೂರು ಸಂಸ್ಥಾನದ ರಕ್ಷಣೆಯಲ್ಲಿ ತನ್ನದೇ ಆದ ಮಹತ್ವದ ಪಾತ್ರವಹಿಸಿ, ವೀರರಾಣಿ ಕಿತ್ತೂರು ಚನ್ನಮ್ಮಳ ಬಲಗೈ ಭಂಟನಾಗಿ ಬ್ರಿಟಿಷರಿಗೆ ಸಿಂಹಸ್ವಪ್ನವಾಗಿದ್ದನು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ, ಸಂಪನ್ಮೂಲ ವ್ಯಕ್ತಿ ಡಾ. ಮಾಧವ ಗುಡಿ ಅಭಿಪ್ರಾಯಪಟ್ಟರು.

ಶುಕ್ರವಾರ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ವಿದ್ಯಾಸಂಗಮ ಬೆಳಗಾವಿ, ಸಂಗೊಳ್ಳಿ ರಾಯಣ್ಣ ಅಧ್ಯಯನ ಪೀಠ ಹಾಗೂ ಸಹ್ಯಾದ್ರಿ ಕಲಾ ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ವಿಜಯಪುರ ಇವರ ಸಂಯುಕ್ತಆಶ್ರಯದಲ್ಲಿಜರುಗಿದಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ವಿಶೇಷ ಉಪನ್ಯಾಸ ಸರಣಿ ಮಾಲಿಕೆಯ ಐದನೇ ಉಪನ್ಯಾಸದಲ್ಲಿ ಅವರು "ಸಮರವೀರ ಸಂಗೊಳ್ಳಿ ರಾಯಣ್ಣ" ಎಂಬ ಉಪನ್ಯಾಸ ಮಾಲಿಕೆಯನ್ನು ಉದ್ದೇಶಿಸಿ ಮಾತನಾಡಿ, ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಯ ವಿರುದ್ಧ ಅವರ ಸಾವಿನವರೆಗೂ ಹೋರಾಡಿ ಜೀವಾವಧಿ ಶಿಕ್ಷೆಯನ್ನನುಭವಿಸಿ ಕಿತ್ತೂರು

ನಾಡನ್ನು ಸಂರಕ್ಷಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಸಂಗೊಳ್ಳಿ ರಾಯಣ್ಣ ಅಧ್ಯಯನಪೀಠದ ನಿರ್ದೇಶಕ ಡಾ.ರವಿ ದಳವಾಯಿ ಮಾತನಾಡಿ, ರಾಯಣ್ಣ ಹುಟ್ಟಿದ್ದು ಆಗಸ್ಟ್ 15ರಂದು ಅಂದು ಭಾರತೀಯರಿಗೆ ಸ್ವಾತಂತ್ರ್ಯದ ದಿನ. ರಾಯಣ್ಣ ವೀರ ಮರಣವನ್ನು ಅಪ್ಪಿದ್ದು ಅದು ಜನವರಿ 26ರಂದು ಅಂದು ಭಾರತೀಯರಿಗೆ ಗಣರಾಜ್ಯದ ದಿನ ಹೀಗೆ ಹುಟ್ಟು ಸಾವಿನಲ್ಲೂ ಕೂಡ ದೇಶದ ಅಮರತ್ವವನ್ನು ಮೆರೆದ ಶ್ರೇಷ್ಠ ಸ್ವಾತಂತ್ರ್ಯ ಹೋರಾಟಗಾರ ಸಂಗೊಳ್ಳಿ ರಾಯಣ್ಣ ಎಂದರು.

ಕಿತ್ತೂರು ರಾಣಿ ಚೆನ್ನಮ್ಮಳ ಆಪ್ತ ಸೇವಕನಾಗಿ ಕಿತ್ತೂರು ಸಂಸ್ಥಾನದ ರಕ್ಷಣೆಯಲ್ಲಿ ಮಹತ್ವದ ಪಾತ್ರವಹಿಸಿ ಕೊನೆಗೆ ಮರಣದಂಡನೆ ಶಿಕ್ಷೆಯನ್ನು ಅನುಭವಿಸಿ ದೇಶದ ಜನರಿಗೆ ಒಗ್ಗಟ್ಟಿನಿಂದ ಮಾತ್ರ ಸ್ವಾತಂತ್ರ್ಯ ದೊರಕಿಸಿಕೊಳ್ಳಬಲ್ಲದು ಎಂಬುದನ್ನು ಹೇಳುತ್ತಾ ಜೀವ ಬಿಟ್ಟ ಮಹಾನ್ ದೇಶಪ್ರೇಮಿ ಎಂದರು.

ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಸ್. ಬಾಪಗೊಂಡ ಅವರು ಮಾತನಾಡಿ, ರಾಯಣ್ಣ ಬದುಕಿದ್ದು ಕೇವಲ 33 ವರ್ಷಗಳಾದರೂ ಸಹ ಯಾರು ಮಾಡದ ಸಾಧನೆಯನ್ನು ದೇಶಕ್ಕಾಗಿ ಮಾಡಿ ತನ್ನ ಪ್ರಾಣವನ್ನು ಅರ್ಪಣೆ ಮಾಡಿದನು. ಆತನ ಜೊತೆ ಇತರ ಏಳು ಜನ ಅನುಯಾಯಿಗಳು ಮರಣದಂಡನೆಗೆ ಗುರಿಯಾಗಿದ್ದನ್ನು ನಾವಿಲ್ಲಿ ಸ್ಮರಿಸಬಹುದು ಎಂದರು.

ಮಹಾವಿದ್ಯಾಲಯದ ಪ್ರಾಚಾರ್ಯ ಬಿ. ಎಸ್. ಬಾಪಗೊಂಡ ಸ್ವಾಗತಿಸಿದರು. ಎಸ್.ಎಸ್. ಲೋಣಿ ಹಾಗೂ ಪ್ರಿಯಾಂಕಾ ಭೋಸಲೆ ನಿರೂಪಿಸಿದರು. ಪ್ರಾಧ್ಯಾಪಕ ಓ.ಎಸ್ ನಾವಿ ವಂದಿಸಿದರು.

ಈ ಸಂದರ್ಭದಲ್ಲಿ ಪ್ರಾಧ್ಯಾಪಕ ಎನ್. ಪಿ. ಕೋಟಿ, ಪ್ರಶಾಂತ ಬೆಣ್ಣಿಮುದ್ದಿ ಮುಂತಾದವರು ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಬಿ.ಎ, ಬಿ.ಕಾಂ ಹಾಗೂ ಬಿ.ಎಸ್.ಸಿ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಶಿಕ್ಷಣದ ಗುಣಮಟ್ಟಕ್ಕೆ ಕತ್ತರಿ !

ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಪಾಸಿಂಗ್ ಅಂಕ ಇಳಿಕೆ: ಯಾರಿಗೆ ಲಾಭ, ಯಾರಿಗೆ ನಷ್ಟ ?

ಕರ್ನಾಟಕ ಸರ್ಕಾರವು ಇತ್ತೀಚೆಗೆ ಎಸ್. ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಪ್ರತಿ ವಿಷಯಕ್ಕೆ ಕನಿಷ್ಠ ಅಂಕಗಳನ್ನು 35 ರಿಂದ 33 ಕ್ಕೆ ಇಳಿಸಿರುವ ನಿರ್ಧಾರವು ಶಿಕ್ಷಣ ವಲಯದಲ್ಲಿ ಭಾರಿ ವಿವಾದಕ್ಕೆ ಕಾರಣವಾಗಿದೆ. ಉತ್ತೀರ್ಣರಾಗುವವರ ಪ್ರಮಾಣ ಕಡಿಮೆಯಾಗುತ್ತಿದೆ ಎಂಬ ಸರ್ಕಾರದ ಸಮರ್ಥನೆಯು ಮೇಲ್ನೋಟಕ್ಕೆ ಸಕಾರಾತ್ಮಕವಾಗಿ ಕಂಡರೂ, ಈ ಹೊಸ ನಿಯಮದ ಆಳದಲ್ಲಿ ಅಡಗಿರುವ ಅಪಾಯಗಳು ಮತ್ತು ಶಿಕ್ಷಣದ ಗುಣಮಟ್ಟದ ಮೇಲೆ ಅದು ಬೀರಬಹುದಾದ ನಕಾರಾತ್ಮಕ ಪರಿಣಾಮಗಳು ಶಿಕ್ಷಣ ತಜ್ಞರ ನಿದ್ದೆಗೆಡಿಸಿವೆ. ಶಿಕ್ಷಣ ಸಚಿವರಿಗೆ ಬಂದ 701 ಪತ್ರಗಳು ಈ ಬದಲಾವಣೆಗೆ ಬೆಂಬಲ ಸೂಚಿಸಿದ್ದವು ಎಂದು ಹೇಳಿದ್ದರೂ, ಕೇವಲ ಅಂಕ ಅಂಶಗಳ ಆಧಾರದ ಮೇಲೆ ಮಹತ್ವದ ಶೈಕ್ಷಣಿಕ ನೀತಿಯನ್ನು ರೂಪಿಸುವುದು ಎಷ್ಟು ಸರಿ ?

ಹೊಸ ನಿಯಮ: ಕನಿಷ್ಠ ಅಂಕಗಳ ಕಳಚಿದ ಕಟ್ಟುಪಾಡು: ಹಿಂದಿನ ಪರೀಕ್ಷಾ ಪದ್ಧತಿಯಲ್ಲಿ 80 ಅಂಕಗಳ ಲಿಖಿತ ಪರೀಕ್ಷೆಗೆ 24 ಹಾಗೂ 70 ಅಂಕಗಳ ಲಿಖಿತ ಪರೀಕ್ಷೆಗೆ 21 ಅಂಕಗಳನ್ನು ಕಡ್ಡಾಯವಾಗಿ ಪಡೆಯುವುದು ಅನಿವಾರ್ಯವಾಗಿತ್ತು.

ಹೊಸ ನಿಯಮದ ಪ್ರಕಾರ, 70 ಅಂಕಗಳ ಲಿಖಿತ ಪರೀಕ್ಷೆಮತ್ತು 30 ಅಂಕಗಳ ಆಂತರಿಕ ಪರೀಕ್ಷೆ ಇದ್ದಲ್ಲಿ, ವಿದ್ಯಾರ್ಥಿಯು ಆಂತರಿಕ ಪರೀಕ್ಷೆಯಲ್ಲಿ 30 ಕ್ಕೆ 30 ಅಂಕಗಳನ್ನು ಗಳಿಸಿ, ಲಿಖಿತ ಪರೀಕ್ಷೆಯಲ್ಲಿ ಕೇವಲ 3 ಅಂಕಗಳನ್ನು (30+3 = 33) ಪಡೆದರೂ ಉತ್ತೀರ್ಣನಾಗುತ್ತಾನೆ. ಇಲ್ಲಿಯೇ ಅತಿ–ದೊಡ್ಡ ಅಪಾಯ ಅಡಗಿದೆ.

1) ಆಂತರಿಕ ಅಂಕಗಳ ದುರುಪಯೋಗ ಮತ್ತು ಪಾರದರ್ಶಕತೆಯ ಕುಸಿತ : ಆಂತರಿಕ ಅಂಕಗಳನ್ನು ನೀಡುವ ಸಂಪೂರ್ಣ ಅಧಿಕಾರ ಆಯಾ ಶಾಲಾ/ಕಾಲೇಜುಗಳ ಶಿಕ್ಷಕರು/ಉಪನ್ಯಾಸಕರ ಕೈಯಲ್ಲಿದೆ. ಯಾವುದೇ ಕಟ್ಟುನಿಟ್ಟಿನ ಅಥವಾ ಪಾರದರ್ಶಕವಾದ ಮಾನದಂಡಗಳಿಲ್ಲದೆ, ಎಲ್ಲ ವಿದ್ಯಾರ್ಥಿಗಳಿಗೆ 20 ಕ್ಕೆ 20 ಅಥವಾ 30 ಕ್ಕೆ 30 ಅಂಕಗಳನ್ನು ಧಾರಾಳವಾಗಿ ನೀಡಿಬಿಟ್ಟರೆ, ಕಳಪೆ ವಿದ್ಯಾರ್ಥಿಯನ್ನೂ ಸುಲಭವಾಗಿ ಉತ್ತೀರ್ಣಗೊಳಿಸಬಹುದು ಎಂಬುದು ಈ ನಿಯಮದ ಹಿಂದಿನ 'ಸುಲಭ ಸೂತ್ರ'. ಈಗಾಗಲೇ, ರಾಜ್ಯದಲ್ಲಿ ಶೂನ್ಯ ಫಲಿತಾಂಶ ಹೊಂದಿರುವ ಅಥವಾ ಕಡಿಮೆ ಫಲಿತಾಂಶ ಹೊಂದಿರುವ ಸಂಸ್ಥೆಗಳು, ತಮ್ಮ ಆಡಳಿತ ಮಂಡಳಿ ಮತ್ತು ಸಿಬ್ಬಂದಿಯ ವೈಫಲ್ಯ ಮುಚ್ಚಿ ಹಾಕಲು, ಪ್ರತಿಯೊಬ್ಬ ವಿದ್ಯಾರ್ಥಿಗೂ ಗರಿಷ್ಠ ಆಂತರಿಕ ಅಂಕಗಳನ್ನು ನೀಡಿ, ತಮ್ಮ 'ಫಲಿತಾಂಶದ ಪ್ರಮಾಣ' ವನ್ನು ಹೆಚ್ಚಿಸಿಕೊಳ್ಳುವ ಸ್ಪರ್ಧೆಗೆ ಇಳಿಯುವುದು ಖಚಿತ. ಇದು ಶಿಕ್ಷಣ ಸಂಸ್ಥೆಗಳಿಗೆ ತಾತ್ಕಾಲಿಕವಾಗಿ ಲಾಭವಾದರೂ, ಮೌಲ್ಯಮಾಪನ ಪ್ರಕ್ರಿಯೆಯ ವಿಶ್ವಾಸಾರ್ಹತೆಯು ಸಂಪೂರ್ಣವಾಗಿ ಕುಸಿಯುತ್ತದೆ.

2) ವಿದ್ಯಾರ್ಥಿಗಳು ಮತ್ತು ಶಿಕ್ಷಕರ ನಿಷ್ಕ್ರೀಯತೆ : ಲಿಖಿತ ಪರೀಕ್ಷೆಯಲ್ಲಿ ಕನಿಷ್ಠ ಅಂಕಗಳ ಭಯ ಇಲ್ಲದಿರುವುದರಿಂದ, ವಿದ್ಯಾರ್ಥಿಗಳಲ್ಲಿ ಓದುವ ಹಾಗೂ ಕಲಿಯುವ ಗಂಭೀರತೆ ಕಡಿಮೆಯಾಗುತ್ತದೆ. ವಿದ್ಯಾರ್ಥಿಗಳಿಗೆ ಹಗುರವಾದ ಕೆಲಸ: ಆಂತರಿಕ ಅಂಕಗಳಿಂದಲೇ ಪಾಸಾಗಬಹುದು ಎಂಬ ಲೆಕ್ಕಾಚಾರದಿಂದಾಗಿ, ಪಾಠ ಪ್ರವಚನಗಳ ಕಡೆ ಗಮನ ಹರಿಸದೆ, ಕೇವಲ ಹಾಜರಾತಿಗೆ ಮತ್ತು ಶಿಕ್ಷಕರನ್ನು ಒಲಿಸಿಕೊಳ್ಳಲು ಮಾತ್ರ ಪ್ರಯತ್ನಿಸಬಹುದು. ಶಿಕ್ಷಕರ ಮೇಲಿನ ಪರಿಣಾಮ: ಶಿಕ್ಷಕರು ಸಹ ವಿದ್ಯಾರ್ಥಿಗಳಿಗೆ ಕಠಿಣವಿಷಯಗಳನ್ನುಕಲಿಸುವಒತ್ತಡದಿಂದ ವಿಮುಕ್ತರಾಗುತ್ತಾರೆ. ಏಕೆಂದರೆ, ಕೊನೆಗೆ ಹೇಗಿದ್ದರೂ 'ಆಂತರಿಕ ಅಂಕಗಳ' ಮೂಲಕ ಎಲ್ಲರೂ ಪಾಸಾಗುತ್ತಾರೆ ಎಂಬ ಮನೋಭಾವ ಬರಬಹುದು. ಇದು ಇಡೀ ಶಿಕ್ಷಣ ಸಮುದಾಯವನ್ನು 'ಹಗುರಗೊಳಿಸಿ', ನಿಷ್ಕ್ರೀಯ ಗೊಳಿಸಿದಂತಾಗುತ್ತದೆ.

3) ಗುಣಮಟ್ಟದ ಮೇಲಿನ ಭೀಕರ ಪರಿಣಾಮ : ಕೇವಲ ಪಾಸಿಂಗ್ ಪ್ರಮಾಣವನ್ನು ಹೆಚ್ಚಿಸುವುದು ಸರ್ಕಾರದ ಉದ್ದೇಶವಾದರೆ, ಅದು ಕೇವಲ ಸಂಖ್ಯೆಗಳ ಭ್ರಮೆಯನ್ನು ಸೃಷ್ಟಿಸುತ್ತದೆ. ನಿಜವಾದ ಶೈಕ್ಷಣಿಕ ಗುಣಮಟ್ಟ ಕುಸಿಯುತ್ತದೆ. ಮೂಲಭೂತ ಜ್ಞಾನಕ್ಕೆ ಧಕ್ಕೆ: ಲಿಖಿತ ಪರೀಕ್ಷೆಯಲ್ಲಿ ಕೇವಲ 3–5 ಅಂಕಗಳನ್ನು ಪಡೆದು ಉತ್ತೀರ್ಣರಾದ ವಿದ್ಯಾರ್ಥಿಯು ಆ ವಿಷಯದ ಬಗ್ಗೆ ಕನಿಷ್ಠ ತಿಳುವಳಿಕೆಯನ್ನೂ ಹೊಂದಿರುವುದಿಲ್ಲ. ಇಂತಹ ವಿದ್ಯಾರ್ಥಿಗಳು ಉನ್ನತ ಶಿಕ್ಷಣಕ್ಕೆ ಕಾಲಿಟ್ಟಾಗ ಅಥವಾ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿದಾಗ ಭಾರೀ ಹಿನ್ನಡೆ ಅನುಭವಿಸುತ್ತಾರೆ. ಸಾಮಾಜಿಕ ನಷ್ಟ: ರಾಜ್ಯದ ಮಾನವ ಸಂಪನ್ಮೂಲದ ಗುಣಮಟ್ಟ ಕುಸಿಯುತ್ತದೆ. ಕಡಿಮೆ ಜ್ಞಾನ ಮತ್ತು ಕೌಶಲ್ಯ ಹೊಂದಿದ ಪದವೀಧರರು ಸಮಾಜದ ಉತ್ಪಾದಕತೆಗೆ ದೊಡ್ಡ ಕೊಡುಗೆ ನೀಡಲು ಸಾಧ್ಯವಾಗುವುದಿಲ್ಲ. ಇದು ರಾಜ್ಯದ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಯ ಮೇಲೆ ದೀರ್ಘಕಾಲೀನ ನಕಾರಾತ್ಮಕ ಪರಿಣಾಮ ಬೀರುತ್ತದೆ.

4) ವಿರೋಧಾಭಾಸಗಳು ಮತ್ತು ಹಿಂದಿನ ಪಾಠಗಳು : ಕಳೆದ ದಿನಗಳಲ್ಲಿ, ಪರೀಕ್ಷಾ ವಿಧಾನಗಳಲ್ಲಿ ಬದಲಾವಣೆ ಮಾಡಿದಾಗ (ಉದಾಹರಣೆಗೆ, 20 ಬಹು ಆಯ್ಕೆ ಪ್ರಶ್ನೆಗಳ ಪರಿಚಯ), ರಾಜ್ಯಾದ್ಯಂತ ಸಾವಿರಾರು ವಿದ್ಯಾರ್ಥಿಗಳು ಕೇವಲ ಆ ಬಹು ಆಯ್ಕೆ ಪ್ರಶ್ನೆಗಳಿಗೆ ಉತ್ತರಿಸಿಯೇ ಕಡ್ಡಾಯ ಅಂಕಗಳನ್ನು ಗಳಿಸಿ ಉತ್ತೀರ್ಣರಾಗಿದ್ದರು. ಆಗಲೂ ಶಿಕ್ಷಕರೇ ಉತ್ತರ ಹೇಳಿಕೊಟ್ಟ ಆರೋಪಗಳು ಇದ್ದವು. ಈ ಇತಿಹಾಸವನ್ನು ಮರೆಮಾಚಲು ಸಾಧ್ಯವಿಲ್ಲ. ಹೀಗಿರುವಾಗ, ಶಿಕ್ಷಕರ ಸಂಪೂರ್ಣ ನಿಯಂತ್ರಣದಲ್ಲಿರುವ 20/30 ಆಂತರಿಕ ಅಂಕಗಳು ಪ್ರಾಮಾಣಿಕವಾಗಿ ನಿರ್ಣಯವಾಗುತ್ತವೆ ಎಂದು ನಿರೀಕ್ಷಿಸುವುದು ಭ್